# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 274 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 22–05–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 274 | Title- Code: KARKAN 28269 | Chitradurga | Date: 22-05-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮಳೆ ವರದಿ: ಸೂಗೂರಿನಲ್ಲಿ 108.6 ಮಿ.ಮೀ ಮಳೆ 2

ಸೊರಗಿದ್ದ ಪ್ರಕೃತಿ ಜತೆ ಮಳೆ ತಂದ ಜೀವಕಳೆ 3

ಪಿಯು ವಿಜ್ಞಾನ ಕನ್ನಡದಲ್ಲಿ ಬೋಧನೆ: ಪ್ರಾಯೋಗಿಕವಾಗಿ ಪ್ರತ್ಯೇಕ ವಿಭಾಗ ಶುರು 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಹೆಚ್ಚಿನ ಶುಲ್ಕ ವಸೂಲಿ; ಶಿಕ್ಷಣ ಸಂಸ್ಥೆಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ: ಟಿ.ವೆಂಕಟೇಶ್

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಶೈಕ್ಷಣಿಕ ಚಟುವಟಿಕೆಯಲ್ಲಿ ಸಕ್ರಿಯವಾಗಿರುವ ಹಲವು ಶಿಕ್ಷಣ ಸಂಸ್ಥೆಗಳು ಮಕ್ಕಳ ದಾಖಲಾತಿಗಾಗಿ ಮಾನವೀಯತೆ ಮರೆತು ಸರ್ಕಾರ ನಿಗಧಿಪಡಿಸಿದ್ದಕ್ಕಿಂತ ಹೆಚ್ಚಿನ ಶುಲ್ಕ ವಸೂಲಿ ಮಾಡುತ್ತಿರುವ ಬಗ್ಗೆ ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಬರುತ್ತಿದ್ದು, ಅಂತಹ ಶಿಕ್ಷಣ ಸಂಸ್ಥೆಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದು ಅನಿವಾರ್ಯವಾಗಲಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಹೇಳಿದರು.

ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಶೈಕ್ಷಣಿಕ ಪ್ರಗತಿ, ಕಲಿಕೆಯಲ್ಲಿ ಗುಣಾತ್ಮಕ ಸುಧಾರಣೆ ಮತ್ತು ಮಾದರಿ ಫಲಿತಾಂಶದ ಕುರಿತು ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಶಾಲಾ ಆಡಳಿತಮಂಡಳಿಯಪದಾಧಿಕಾರಿಗಳಿಗಾಗಿ ಮಂಗಳವಾರ ಏರ್ಪಡಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಶಾಲಾ ದಾಖಲಾತಿಯ ಆರಂಭ, ಅಗತ್ಯ ದಾಖಲೆಗಳು, ದಾಖಲಾತಿಯ ಮುಕ್ತಾಯ, ಶುಲ್ಕ, ಸರ್ಕಾರದ ಮಾನದಂಡ, ಮತ್ತಿತರ ನಿಬಂಧನೆಗಳ ಕುರಿತು ಜನಸಾಮಾನ್ಯರಿಗೆ ಹಾಗೂ ಪೋಷಕರಿಗೆ ತಿಳಿಯುವಂತೆ ಶಾಲೆಯ ಪ್ರಕಟಣಾ ಫಲಕದಲ್ಲಿ ಮಾಹಿತಿಯನ್ನು ಬಿತ್ತರಿಸುವಂತೆ ಸೂಚಿಸಿದರು. ಚಿತ್ರದುರ್ಗ ಜಿಲ್ಲೆ ಬರಪೀಡಿತ ಪ್ರದೇಶವಾಗಿದ್ದು, ಜನಜೀವನ ನಡೆಸುವುದು ದುಸ್ತರವಾಗಿರುವ ಈ ಸಂದರ್ಭದಲ್ಲಿ ಶಾಲಾ ದಾಖಲಾತಿಗಾಗಿ ಹೆಚ್ಚಿನ ಶುಲ್ಕ ವಸೂಲಿ ಮಾಡುವುದು ಸರಿಯಲ್ಲ. ಸರ್ಕಾರ ನಿಗಧಿಪಡಿಸಿದ ಶುಲ್ಕವನ್ನು ಪಡೆದು ಮಕ್ಕಳ ದಾಖಲಾತಿ ಮಾಡಿಕೊಳ್ಳಬೇಕು. ಕೆಲವು ಸಂದರ್ಭದಲ್ಲಿ ಮಕ್ಕಳಿಗೆ ಶುಲ್ಕ ಪಾವತಿಸಲು ಕಷ್ಟಸಾಧ್ಯವಾದಲ್ಲಿ ಸುಲಭ ಕಂತಿನಲ್ಲಿಹಣ ಪಾವತಿಸಲು ಅವಕಾಶ ನೀಡಬೇಕು. ಒಟ್ಟಾರೆಯಾಗಿ ಖಾಸಗಿ ಶಾಲೆಗಳ ಆಡಳಿತ ಮಂಡಳಿಯವರು ಜನಸ್ನೇಹಿಯಾಗಿ ವ್ಯವಹರಿಸುವಂತೆ ಸಲಹೆ ನೀಡಿದರು. ಪ್ರಸಕ್ತ ಸಾಲಿನ ಎಸ್‌ಎಸ್‌ಎಲ.ಸಿ ಪರೀಕ್ಷಾ ಫಲಿತಾಂಶ ಅತ್ಯಂತ ಕನಿಷ್ಠವಾಗಿದೆ. ಈ ಕಳಪೆ ಫಲಿತಾಂಶಕ್ಕೆ ಸೂಕ್ತ ಕಾರಣ ಏನು ಎನ್ನುವ ಬಗ್ಗೆಯೂ ಶಿಕ್ಷಕರು ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಅವಲೋಕನ ನಡೆಸಬೇಕಾದ ಅನಿವಾರ್ಯತೆ ಎದುರಾಗಿದೆ. ಪ್ರಸಕ್ತ ಶೈಕ್ಷಣಿಕ ಸಾಲಿನ ಆರಂಭದಲ್ಲಿಯೇ ಕಳೆದ ಸಾಲಿನ ನ್ಯೂನತೆಗಳು ಮರುಕಳಿಸದಂತೆ ಫಲಿತಾಂಶ ಸುಧಾರಣೆಗೊಳಿಸಲು ಶಿಕ್ಷಕರು ಅಗತ್ಯ ಸುಧಾರಣಾ ಕ್ರಮಗಳನ್ನು ಕೈಗೊಳ್ಳಬೇಕು ಎಂದ ಅವರು, ಅಗತ್ಯವಿದ್ದಲ್ಲಿ ವಿಷಯ ತಜ್ಞರನ್ನು ಆಹ್ವಾನಿಸಿ, ಅವರಿಂದ ವಿಷಯಾಧಾರಿತ ತರಬೇತಿ ಕಾರ್ಯಾಗಾರಗಳನ್ನು ಆಯೋಜಿಸಲು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು. ಮುಂದಿನ ಸಾಲಿನ ಎಸ್.ಎಲ್.ಸಿ.ಪರೀಕ್ಷಾ ಫಲಿತಾಂಶ ಉತ್ತಮ ಶ್ರೇಣಿಯಲ್ಲಿದ್ದು, ಮುಂಚೂಣಿ ಹತ್ತರಲ್ಲಿ ಒಂದಾಗಿರುವಂತೆ ಶಿಕ್ಷಕರು ಗಮನಹರಿ ಸಬೇಕು. ಅದಕ್ಕಾಗಿ ಶಿಕ್ಷಕರು ಈಗಿನಿಂದಲೇ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಆಂಗ್ಲ, ಗಣಿತ ಮತ್ತು ವಿಜ್ಞಾನ ವಿಷಯಗಳ ಶಿಕ್ಷಕರು ವಿಶೇಷವಾಗಿ ಕಾಳಜಿ ವಹಿಸಬೇಕೆಂದ ಅವರು, ಎಲ್ಲಾ ಶಿಕ್ಷಕರು ತಮ್ಮ ಜವಾಬ್ದಾರಿಯರಿತು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕೆಂದವರು ನುಡಿದರು.ಮಕ್ಕಳ ಶೈಕ್ಷಣಿಕ ಪ್ರಗತಿ ಕುರಿತು ಶಿಕ್ಷಕರು ಮಾಡಿಕೊಂಡಿರುವ ಸಿದ್ಧತೆಗಳ, ಬೋಧನಾ ಕ್ರಮಗಳ ಕುರಿತು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಖುದ್ದು ಶಾಲೆಗೆ ಭೇಟಿ ನೀಡಿ ಪರಿಶೀಲಿಸಬೇಕು. ಅಗತ್ಯವಿದ್ದಲ್ಲಿ ಸೂಕ್ತ ಸುಧಾರಣಾ ಕ್ರಮಗಳ ಬಗ್ಗೆ ಮಾಹಿತಿ ನೀಡಬೇಕು. ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರುವ ಶಿಕ್ಷಕರ ಕ್ರಮವನ್ನು ಸಹಿಸಿಕೊಳ್ಳಲಾಗುವುದಿಲ್ಲ. ಅಲ್ಲದೇ ಅಂತಹ ಶಿಕ್ಷಕರ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು. ಅಲ್ಲದೇ ಸುಧಾರಣಾ ಕ್ರಮವಾಗಿ ದಕ್ಷ ಶಿಕ್ಷಕರ ಸೇವೆಯನ್ನು ಬಳಸಿಕೊಳ್ಳಲಾಗುವುದು ಎಂದರು.

ನಾಗಾಲೋಟದಲ್ಲಿ ಓಡುತ್ತಿರುವ ವಿಶ್ವದ ವೇಗಕ್ಕೆ ನಮ್ಮ ಮಕ್ಕಳನ್ನು ಸಿದ್ಧಪಡಿಸುವುದು ಸವಾಲಿನ ಕೆಲಸ. ಎಲ್ಲಾ ಸೌಲಭ್ಯಗಳನ್ನು ಪಡೆದು, ಶಿಕ್ಷಣ ಪಡೆಯುತ್ತಿರುವ ನಗರದ ಮಕ್ಕಳ ಶೈಕ್ಷಣಿಕ ವೇಗಕ್ಕೆ ಯಾವುದೇ ಅತ್ಯಾಧುನಿಕ ಸೌಲಭ್ಯಗಳನ್ನು ಕಾಣದಿರುವ ಗ್ರಾಮೀಣ ಮಕ್ಕಳನ್ನು ಸಿದ್ಧಪಡಿಸಿ, ಮಕ್ಕಳಲ್ಲಿ ಸ್ಪರ್ಧಾತ್ಮಕ ಭಾವ ಬೆಳೆಸಲು ಶಿಕ್ಷಕರು ಮಾನವೀಯ ನೆಲೆಯಲ್ಲಿ ಪ್ರಾಮಾಣಕವಾಗಿ ಕಾರ್ಯನಿರ್ವಹಿಸಬೇಕು. ಇದು ಸಮಾಜಕ್ಕೆ ಉತ್ತಮ ಸಂದೇಶ ರವಾನೆಯಾಗಲಿದೆ ಎಂದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ನಾಸಿರುದ್ದೀನ್, ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ ಸೇರಿದಂತೆ ಎಲ್ಲಾ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಿಕ್ಷಣ ಸಂಸ್ಥೆಗಳ ಮುಖ್ಯೋಪಾಧ್ಯಾಯರು, ಶಾಲಾ ಆಡಳಿತ ಮಂಡಳಿ ಮುಖ್ಯಸ್ಥರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಬೀಜ ಗೊಬ್ಬರ ಕೊರತೆಯಾಗದಂತೆ ನೋಡಿಕೊಳ್ಳಿ: ಸಿಎಂ

» **ಬೆಂಗಳೂರು**

ರಾಜ್ಯಾದ್ಯಂತ ಮುಂಗಾರು ಕೃಷಿ ಚಟುವಟಿಕೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಬೀಜ ಮತ್ತು ಗೊಬ್ಬರಕ್ಕೆ ಕೊರತೆಯಾಗದಂತೆ ನೋಡಿಕೊಳ್ಳಿ ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಬೀಜ ಮತ್ತು ಗೊಬ್ಬರಕ್ಕಾಗಿ ಹಾವೇರಿಯಲ್ಲಿ ರೈತರು ಸಾಲುಗಟ್ಟಿ ನಿಂತಿದ್ದ ವಿಷಯ ತಿಳಿಯುತ್ತಿದ್ದಂತೆ ಮುಖ್ಯಮಂತ್ರಿಗಳು ಕೃಷಿ ಸಚಿವ ಚೆಲುವರಾಯಸ್ವಾಮಿ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ರೈತರು ಕೃಷಿ ಚಟುವಟಿಕೆ ಆರಂಭಿಸಿದ್ದಾರೆ. ಆದ್ದರಿಂದ ರೈತರು ಬೀಜ, ಗೊಬ್ಬರಕ್ಕೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು ಎಂದು ಹೇಳಿದರು.

### ಬಡವರಿಗೆ ಆರ್ಥಿಕ ಸಬಲತೆ ತುಂಬುವುದು ಅಭಿವೃದ್ಧಿ ಅಲ್ಲವೇ? ಸಿಎಂ

» **ಮೈಸೂರು**

ಬಡವರಿಗೆ ಆರ್ಥಿಕ ಸಬಲತೆ ಕೊಡುವುದು ಅಭಿವೃದ್ಧಿ ಅಲ್ಲವೇ? ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು. ಅವರು ಮೈಸೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಗ್ಯಾರಂಟಿ ಯೋಜನೆಗಳನ್ನೇ ಸಾಧನೆ ಎಂದು ಬಿಂಬಿಸಲಾಗುತ್ತಿದೆ. ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ ಎಂದು ಬಿಜೆಪಿ ಆರೋಪಿಸಿರುವ ಬಗ್ಗೆ ಮಾತನಾಡಿ ಬಿಜೆಪಿ ಸುಳ್ಳು ಹೇಳುತ್ತಿದೆ. ನೀರಾವರಿಗೆ 18,000 ಕೋಟಿ ವೆಚ್ಚ ಮಾಡಲಾಗಿದೆ. ಅದು ಕಡಿಮೆಯೇ? , ಏನು ಮಾಡಿಲ್ಲ ಎಂದರೆ ಏನು? .ಗ್ಯಾರಂಟಿಗಳನ್ನು ಒಳಗೊಂಡಂತೆ 1.ಲಕ್ಷ 20 ಸಾವಿರ ಕೋಟಿ ರೂ.ಗಳನ್ನು ಬಜೆಟ್ ನಲ್ಲಿ ಮೀಸಲಿರಿಸಿದೆ ಎಂದರು. ಬಿಜೆಪಿಯವರು ಬಜೆಟ್ ಓದುವುದಿಲ್ಲ, ಆರ್ಥಿಕತೆ ಬಗ್ಗೆ ತಿಳಿದೂ ಇಲ್ಲ ಬಿಜೆಪಿಯವರು ಬಜೆಟ್ ಓದುವುದಿಲ್ಲ, ಆರ್ಥಿಕತೆ ಬಗ್ಗೆ ಅವರಿಗೆ ತಿಳಿದೂ ಇಲ್ಲ. ಅಭಿವೃದ್ಧಿ ಶೂನ್ಯ ಎನ್ನುತ್ತಾರೆ . ದೇಶಕ್ಕೆ ಕೇವಲ ರಾಜಕೀಯ ಸ್ವಾತಂತ್ರ್ಯ ಬಂದರೆ ಸಾಲದು, ಆರ್ಥಿಕ, ಸಾಮಾಜಿಕ ಶಕ್ತಿ ಬಂದಾಗ ಮಾತ್ರ ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥ ಬರುತ್ತದೆ ಎಂದು ಅಂಬೇಡ್ಕರ್ ಹೇಳಿದ್ದರು. ಈ ಬಗ್ಗೆ ಬಿಜೆ ಪಿಗೆ ತಿಳಿದಿದೆಯೇ ಎಂದು ಮುಖ್ಯಂತ್ರಿಗಳು ಪ್ರಶ್ನಿಸಿದರು.

### ಜಿಟಿಟಿಸಿ: ಅರ್ಜಿ ಅಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ (ಜಿಟಿಟಿಸಿ) 2024–25ನೇ ಸಾಲಿನ ಪ್ರವೇಶಾತಿ ಆರಂಭವಾಗಿದೆ. ಡಿಪ್ಲೊಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್ (DTDM) ಹಾಗೂ ಡಿಪ್ಲೊಮಾ ಇನ್ ಮೆಕಾಟ್ರಾನಿಕ್ಸ್ (DMCH) ಮತ್ತು ಡಿಪ್ಲೊಮಾ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್ (ಆಇಅ) ಕೋರ್ಸುಗಳ ಪ್ರವೇಶ ಪಡೆಯಲು ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನವಾದ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ವೆಬ್‌ಸೈಟ್‌ನಲ್ಲಿ cetonline.karnataka.gov.in/kea ಆನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ. ಆನ್‌ಲೈನ್ ಅರ್ಜಿ ಸಲ್ಲಿಕೆ ಮೇ 13ರಿಂದ ಪ್ರಾರಂಭವಾಗಿದ್ದು, ಮೇ.27 ಅರ್ಜಿ ಸಲ್ಲಿಸಲು ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಸರ್ವೇ ಸಂಖ್ಯೆ 44, ಹಳೆಯ ಬೆಂಗಳೂರು ರಸ್ತೆ, ಕಣಿವೆ ಮಾರಮ್ಮ ದೇವಸ್ಥಾನದ ಹಿಂಭಾಗ, ಕುಂಚಿಗನಹಾಳ್ ಚಿತ್ರದುರ್ಗ, ದೂರವಾಣಿ ಸಂಖ್ಯೆ: 9738465834, 9481866855 ಗೆ ಸಂಪರ್ಕಿಸಬಹುದು.

# ತಾಲ್ಲೂಕಿನಾದ್ಯಂತ ಕೃತಕಾ ಮಳೆಯ ಅಟ್ಟಹಾಸ

### ಮಳೆ ಮತ್ತು ಬೆಳೆಗೆ ಹಾನಿ, ಸಿಡಿಲಿಗೆ ಬಲಿಯಾದ ಕಾರ್ಮಿಕ ಮಹಿಳೆ, ಮೈದುಂಬಿ ಹರಿಯುತ್ತಿರುವ ವೇದಾವತಿ

**ಚಳ್ಳಕೆರೆ:** ಕಳೆದ ಹಲವಾರು ತಿಂಗಳಿನಿಂದ ಬೇಸಿಗೆಯ ರಣಬಿಸಿಲಿಗೆ ಬತ್ತಿಬಾಡಿದ್ದ ವೇದಾವತಿ ನದಿ ಈಗ ನಿರಂತರ ಮಳೆ ಹಿನ್ನೆಲೆಯಲ್ಲಿ ಮೈದುಂಬಿ ಹರಿಯುತ್ತಿದ್ದಾಳೆ. ನದಿಯಲ್ಲಿ ಹರಿಯುವ ನೀರು ನೋಡಲು ಸುತ್ತಮುತ್ತಲ ಜನ ಆಗಮಿಸಿ ಸಂತಸ ವ್ಯಕ್ತಪಡಿಸುತ್ತಿದ್ದಾರೆ. ತಾಲ್ಲೂಕಿನ ಕೋನಿಗರಹಳ್ಳಿ, ನಾರಾಯಣಪುರ ಬ್ಯಾರೇಜ್ ಬಳಿ ವೇದಾವತಿ ನದಿ ನೀರು ತುಂಬು ರಭಸದಿಂದ ಹರಿಯುತ್ತಿದೆ.

**ಸಿಡಿಲಿಗೆ ಬಲಿಯಾದ ಕಾರ್ಮಿಕ ಮಹಿಳೆ:** ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ರೇಖಲಗೆರೆ ಕೆರೆಯಂಗಳದಲ್ಲಿ ಮಹಾರಾಷ್ಟ್ರಮೂಲದ ಕುಟುಂಬವೊಂದು ನೆಲೆಸಿದ್ದು ಪ್ರತಿದಿನ ಅವರು ಈ ಭಾಗದಲ್ಲಿ ಕಟ್ಟಿಗೆ ಸೇರಿಸಿ ಇದ್ದಿಲ್ಲನ್ನು ಸುಟ್ಟು ವ್ಯಾಪಾರ ಮಾಡುತ್ತಿದ್ದರು.


ಪುಟ ↘ 2






# ಮಳೆ: ಕಿತ್ತು ಹೋದ ರಾಷ್ಟ್ರೀಯ ಹೆದ್ದಾರಿ ರಸ್ತೆ ಸಂಚಾರ ದುಸ್ಥರ

» **ಹೊಸದುರ್ಗ**

ಶನಿವಾರ ಬಂದ ಮಳೆಯಿಂದ ತಾಲೂಕಿನಲ್ಲಿ ಸಾಕಷ್ಟು ಸಂಚಲವನ್ನ



ಮೂಡಿಸಿದ್ದರೆ ನಂತರ ಭಾನುವಾರ ಬಂದ ಮಳೆಯಿಂದಲೂ ಸಹಾ ಸಾಕಷ್ಟು ನಷ್ಟ ಅನುಭವಿಸುವಂತಾಗಿದೆ ಅನೇಕ ಮನೆಗಳು ಕುಸಿದು ಬಿದ್ದವೆ ಅಲ್ಲಿಲ್ಲ ಕೆಲವು ಕಡೆ ಬಾಳೆ ಬೆಳೆ ನಷ್ಟವಾಗಿದೆ, ತಾಲೂಕಿನ ಹಲವು ಕಡೆ ವಿದ್ಯುತ್ ಕಂಬಗಳು ಧರೆಗೆ ಉರುಳಿವೆ, ಜೊತೆಗೆ ಕಳಫೆಯಿಂದ ನಿರ್ಮಾಣವಾಗಿರುವ ಸಾಕಷ್ಟು ರಸ್ತೆಗಳು ಕಿತ್ತು ಹೋಗಿ ಕೆಲವು ಕಡೆ ಕುಸಿತ ಉಂಟಾಗಿ ಪ್ರಯಾಣಕ್ಕೆ ದುಸ್ಥರವಾಗಿದೆ.


ಪುಟ ↘ 3


**ಪ್ರಮುಖ ಸುದ್ದಿ**

# ಎಚ್ಚರಿಕೆಯಿಂದ ಮತ ಎಣಿಕೆಕಾರ್ಯ ನಿರ್ವಹಿಸಿ: ಡಿಸಿ

» **ಚಿತ್ರದುರ್ಗ**

ಏಪ್ರಿಲ್ 26ರಂದು ನಡೆದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಯ ಮತ ಎಣಿಕೆ ಕಾರ್ಯವು ಜೂನ್ 04ರಂದು ನಗರದ ಸರ್ಕಾರಿ ವಿಜ್ಞಾನ ಕಾಲೇಜಿನ ನೂತನ ಕಟ್ಟಡದಲ್ಲಿ ನಡೆಯಲಿದ್ದು, ಚುನಾವಣೆಯ ಮತ ಎಣಿಕೆ ಕಾರ್ಯಕ್ಕೆ ನಿಯೋಜಿತ ಅಧಿಕಾರಿ–ಸಿಬ್ಬಂಧಿಗಳು ತಮ್ಮ ಜಬಾಬ್ದಾರಿಯರಿತು ಪ್ರಜ್ಞಾಪೂರ್ವಕವಾಗಿ ಎಚ್ಚರಿಕೆಯಿಂದ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಖಡಕ್ ಸೂಚನೆ ನೀಡಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾ ಎಲ್ಲಾ ತಾಲೂಕುಗಳ ಸಹಾಯಕ ಚುನಾವಣಾಧಿಕಾರಿಗಳು ಹಾಗೂ ಮತ ಎಣಕೆ ಕಾರ್ಯಕ್ಕೆ ನಿಯೋಜಿತ ಅಧಿಕಾರಿ–ಸಿಬ್ಬಂಧಿಗಳಿಗೆ ಚುನಾವಣಾ ಕಾರ್ಯನಿರ್ವಹಣೆ ಕುರಿತು ಏರ್ಪಡಿಸಲಾಗಿದ್ದ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎಲ್ಲಾ ತಾಲೂಕುಗಳ ತಹಶೀಲ್ದಾರರು ತಮ್ಮ ಕ್ಷೇತ್ರದ ವ್ಯಾಪ್ತಿಯ ಮತಗಟ್ಟೆಗಳ ಮತಎಣಿಕೆ ಕಾರ್ಯಕ್ಕೆ ಅಗತ್ಯವಿರುವ ಸಿಬ್ಬಂಧಿಗಳನ್ನು ಮಾತ್ರ ಬಳಸಿಕೊಳ್ಳಬೇಕು.




ಅಗತ್ಯಕ್ಕಿಂತ ಹೆಚ್ಚಿನ ಸಿಬ್ಬಂಧಿಯನ್ನು ನಿಯೋಜಿಸುವುದುಸರಿಯಲ್ಲ.ನಿಯೋಜಿತ ಅಧಿಕಾರಿ–ಸಿಬ್ಬಂಧಿಗಳು ಮತ ಎಣಿಕೆ ದಿನದಂದು ಸಕಾಲದಲ್ಲಿ ಮತಎಣಿಕೆ ಕೇಂದ್ರದಲ್ಲಿ ತಮಗೆ ಸೂಚಿಸಿದ ಸ್ಥಳದಲ್ಲಿ ಹಾಜರಿದ್ದು ಅನವಶ್ಯಕ ಚರ್ಚೆಗಳಿಗೆ ಅವಕಾಶವಿಲ್ಲದಂತೆ ಕಾರ್ಯನಿರ್ವಹಿಸಲು ಸೂಚಿಸಿದರು.

ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಪ್ರತಿ ತಾಲೂಕುವಾರು ಪ್ರತ್ಯೇಕವಾಗಿ ಮತಎಣಿಕೆ ನಡೆಯಲಿದೆ. ಪ್ರತಿ ಸುತ್ತಿನ ಮತಎಣಿಕೆಯದಾಖಲೆಗಳನ್ನುನಿರ್ವಹಿಸಿ, ಸಕ್ಷಮ ಅಧಿಕಾರಿಗಳಿಗೆ ನೀಡಿ ಸಹಿ ಪಡೆದುಕೊಳ್ಳಬೇಕು. ಅದರ ಸಂಪೂರ್ಣ ಜವಾಬ್ದಾರಿಯನ್ನು ಆಯಾ ತಾಲೂಕುಗಳ ತಹಶೀಲ್ದಾರರೆ ನೋಡಿಕೊಳ್ಳಬೇಕು. ಈ ಎಲ್ಲಾ ಚುನಾವಣಾ ಕಾರ್ಯದ ಉಸ್ತುವಾರಿ ಹಾಗೂ ಅಗತ್ಯತೆಗಳನ್ನು ಚುನಾವಣಾ ವೀಕ್ಷಕರ ಉಪಸ್ಥಿತಿಯಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು ಗಮನಿಸಲಿದ್ದಾರೆ ಎಂದರು.

ಚುನಾವಣಾ ಕಾರ್ಯದ ವ್ಯವಸ್ಥಿತ ನಿರ್ವಹಣೆಗೆ ನಿಯೋಜಿತ ಅಧಿಕಾರಿ–ಸಿಬ್ಬಂಧಿಗಳಿಗೆ ಅಗತ್ಯ ತರಬೇತಿಯನ್ನು ನೀಡಲು ಈಗಾಗಲೇ ದಿನಾಂಕವನ್ನು ನಿಗಧಿಪಡಿಸಲಾಗಿದೆ. ಮತಎಣಿಕೆ ಕಾರ್ಯವು ಯಾವುದೇ ಅಡತಡೆಗಳಿಲ್ಲದೆ ಸುಗಮವಾಗಿ ನಡೆಸಲು ಹಾಗೂ ಈ ಎಲ್ಲಾ ವಿದ್ಯಾಮಾನಗಳನ್ನು ಸಕಾಲದಲ್ಲಿ ಜನರಿಗೆ ತಲುಪಿಸುವುದರ ಜೊತೆಗೆ ವ್ಯವಸ್ಥಿತವಾಗಿ ದಾಖಲೆಗಳನ್ನು ನಿರ್ವಹಿಸಲು ಗಣಕಯಂತ್ರ, ಮುದ್ರಣಯಂತ್ರ, ಝೆರಾಕ್ಸ್, ಇಂಟರ್‌ನೆಟ್ ಸಂಪರ್ಕ ಮತ್ತಿತರ ಎಲ್ಲಾ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಜವಾಬ್ದಾರಿಯುತ ಅಧಿಕಾರಿಗಳಿಗೆ ಹೊಣೆಗಾರಿಕೆ ವಹಿಸಲಾಗಿದೆ ಎಂದರು.

ಮತಎಣಿಕೆ ಕಾರ್ಯವನ್ನು ಸಕಾಲದಲ್ಲಿ ಆರಂಭಿಸಿ, ತ್ವರಿತವಾಗಿ ಫಲಿತಾಂಶ ನೀಡಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದ ಅವರು, ಈ ಅವಧಿಯಲ್ಲಿ ಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಅಹಿತಕರ ಘಟನೆಗಳುನಡೆಯದಂತೆನೋಡಿಕೊಳ್ಳಲು ಹಾಗೂ ಶಾಂತಿ–ಸುವ್ಯವಸ್ಥೆ ಕಾಪಾಡಲು ಅಗತ್ಯ ರಕ್ಷಣಾ ಸಿಬ್ಬಂಧಿಗಳ ಸೇವೆಯನ್ನು ಬಳಸಿಕೊಳ್ಳಲಾಗುವುದು ಎಂದವರು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತೀಕ್ ಸೇರಿದಂತೆ ಶಿರಾ ಮತ್ತು ಪಾವಗಡ ಸೇರಿದಂತೆ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಎಲ್ಲಾ ಸಹಾಯಕ ಚುನಾವಣಾಧಿಕಾರಿಗಳು, ನಿಯೋಜಿತ ಅಧಿಕಾರಿ–ಸಿಬ್ಬಂಧಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ರಾಜೀವ ಆದರ್ಶ ಮೈಗೂಡಿಸಿಕೊಂಡು ಪಕ್ಷ ಸಂಘಟಿಸೋಣ: ವೀರಭದ್ರಪ್ಪ



» **ಚಳ್ಳಕೆರೆ**

ನಗರದ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಮಾಜಿ ಪ್ರಧಾನಮಂತ್ರಿ ದಿವಂಗತ ರಾಜೀವಗಾಂಧಿಯವರ 33ನೇ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ ಮಾತನಾಡಿ, ದಿವಂಗತ ಮಾಜಿ ಪ್ರಧಾನಮಂತ್ರಿ ಇಂದಿರಾಗಾಂಧಿ ಗರೀಬಿ ಹಟಾವೋ ಮೂಲಕ ದೇಶದ ಬಡ ಜನರ ಆಶಾಕಿರಣವಾಗಿ ಹೊರಹೊಮ್ಮಿದರು. ಅದೇ ರೀತಿ ದಿವಂಗತ ರಾಜೀವಗಾಂಧಿಯೂಸಹನೂತನತಂತ್ರಜ್ಞಾನವನ್ನು ಜಾರಿಗೆ ತರುವ ಮೂಲಕ ದೇಶವನ್ನು ಅಭಿವೃದ್ಧಿ ಪಥದತ್ತ ಕೊಂಡೊಯುವ ರೂವಾರಿಯಾದರು. ಕಾಂಗ್ರೆಸ್ ಪಕ್ಷದ ಎಲ್ಲಾ ಅಗ್ರಗಣ್ಯ ನಾಯಕರು ರಾಷ್ಟ್ರದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ನಾವೆಲ್ಲರೂ ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ನಡೆಯೋಣವೆಂದರು. ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಪಕ್ಷದ ನಾಯಕರಾದ ಅನ್ವರ್‌ಮಾಸ್ಟರ್, ಬಡಗಿಪಾಪಣ್ಣ, ನೇತಾಜಿಪ್ರಸನ್ನ, ನಗರಂಗೆರೆರಮೇಶ್, ಬಷೀರ್, ನಟರಾಜು, ವೀರಭದ್ರಿ, ಯೋಗೇಶ್ ಮುಂತಾದವರು ಉಪಸ್ಥಿತರಿದ್ದರು.

### ಮಾಸಿಕ ಗಮಕ ವಾಚನ, ವ್ಯಾಖ್ಯಾನ ಕಾರ್ಯಕ್ರಮ ಇದೇ 26 ರಂದು

» **ಚಿತ್ರದುರ್ಗ**

ಚಿತ್ರದುರ್ಗ ನಗರದಲ್ಲಿ ಗಮಕ ಕಲಾಭಿಮಾನಿಗಳ ಸಂಘವು ಪ್ರಾರಂಭವಾಗಿ ನಲವತ್ತು ವರ್ಷಗಳು ಸಂದಿವೆ.ಇದರ ಸವಿ ನೆನೆಪಿಗಾಗಿ ಸಂಘವು ಪ್ರತಿ ತಿಂಗಳು ಮಾಸಿಕ ಕಾರ್ಯಕ್ರಮವನ್ನು ಆಯೋಜಿಸುತ್ತಾ ಬಂದಿದೆ .ಅದರಂತೆ,ಈ ತಿಂಗಳು ಚಿತ್ರದುರ್ಗದ ಆನೆ ಬಾಗಿಲ ಬಳಿ ಇರುವ ರಾಘವೇಂದ್ರಸ್ವಾಮಿಗಳ ಮಠದಲ್ಲಿ ಮಂತ್ರಾಲಯದ ಪ್ರಸ್ತುತ ಪೀಠಾಧಿಪತಿಗಳಾದ ಡಾ॥ ಶ್ರೀ 1008 ಶ್ರೀ ಸುಬುಧೇಂದ್ರ ತೀರ್ಥ ಮಹಾಸ್ವಾಮಿಗಳ ಆಶೀರ್ವಾದದೊಂದಿಗೆ ಇದೇ ತಿಂಗಳ 26 ಭಾನುವಾರ ಸಂಜೆ 6ಗಂಟೆಗೆ ಗಮಕ ವಾಚನ–ವ್ಯಾಖ್ಯಾನ ಕಾರ್ಯಕ್ರಮ ಏರ್ಪಡಿಸಿದೆ. ಕಾವ್ಯ ಭಾಗದ ವಾಚನವನ್ನು ಗಮಕಿ ಶ್ರೀಮತಿ ವಾಣಿ ಪಾಂಡುರಂಗಿ, ಚಿತ್ರದುರ್ಗ ಇವರು ನಡೆಸಿಕೊಡಲಿದ್ದಾರೆ. ಖ್ಯಾನವನ್ನು ಗಮಕಿ ಶ್ರೀಮತಿ ಪದ್ಮಾ ಭೀಮರಾವ್, ಚಿತ್ರದುರ್ಗ ಇವರಿಂದ ನಡೆಯಲಿದೆ. ಾವ್ಯಭಾಗ ಶ್ರೀ ಜಗನ್ನಾಥದಾಸರ ಹರಿಕಥಾಮೃತ ಸಾರದಿಂದ "ಸಕಲ ದುರಿತ ನಿವಾರಣಾ ಸಂಧಿ"ಯದ್ದಾಗಿದೆ. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಪ್ರಾಣೇಶಾಚಾರ್ ಕೊಪ್ಪರ, ವ್ಯವಸ್ಥಾಪಕರು, ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಚಿತ್ರದುರ್ಗ ಇವರು ಭಾಗವಹಿಸಲಿದ್ದಾರೆ. ಎಂದು ಸಂಘಟನೆಗಳ ಪದಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

### ಒಂದೇ ಕುಟುಂಬದ 3 ವ್ಯಕ್ತಿ ಕಾಣೆ

» **ದಾವಣಗೆರೆ**

ದಾವಣಗರೆ ವಿನೋಬ ನಗರದ 1ನೇ ಮೇನ್ 7ನೇ ಕ್ರಾಸ್ ವಾಸಿಯಾದ ಅಂಜನ್ ಬಾಬು ತಂದೆ ಷಣ್ಮುಖಪ್ಪ 34 ವರ್ಷ, ನಾಗವೇಣಿ ಗಂಡ ಅಂಜನ್ ಬಾಬು, 24 ವರ್ಷ, ನಕ್ಷತ್ರ ತಂದೆ ಅಂಜನ್ ಬಾಬು 1 ವರ್ಷ ಇವರುಗಳು 2024 ಏಪ್ರಿಲ್ 12 ರಂದು ಮನೆಯಿಂದ ಹೋದವರು ಇದುವರೆಗೂ ಮನೆಗೆ ವಾಪಸ್ ಬಂದಿರುವುದಿಲ್ಲ. ಚಹರೆ ವಿವರ: ಅಂಜನ್ ಬಾಬು 5.6 ಅಡಿ ಎತ್ತರ, ದುಂಡು ಮುಖ, ಎಣ್ಣೆಗೆಂಪು ಗೋಧಿ ಮೈ ಬಣ್ಣ, ಸಾಧರಣ ಮೈ ಕಟ್ಟು, ಕನ್ನಡ, ಹಿಂದಿ ಮತ್ತು ಇಂಗ್ಲೀಷ್ ಭಾಷೆ ಮಾತನಾಡುತ್ತಾನೆ. ನಾಗವೇಣಿ ; 5 ಅಡಿ ಎತ್ತರ, ದುಂಡು ಮುಖ, ಗೋಧಿ ಮೈ ಬಣ್ಣ, ಸಾಧಾರಣ ಮೈ ಕಟ್ಟು, ಕನ್ನಡ ಭಾಷೆ ಮಾತನಾಡುತ್ತಾನೆ. ಚೆಹರೆ ವಿವರ ; 2 ಅಡಿ ಎತ್ತರ, ದುಂಡು ಮುಖ, ಗೋಧಿ ಮೈ ಬಣ್ಣ, ಸಾಧಾರಣ ಮೈ ಕಟ್ಟು, ಇವರ ಬಗ್ಗೆ ಮಾಹಿತಿ ದೊರಕಿದಲ್ಲಿ ಪಿ.ಜೆ ಬಡಾವಣೆ ಪೊಲೀಸ್ ಠಾಣೆ ದೂ.ಸಂ: 08192–272012, 08192–259213, 08192–253400, 08192–253100 ಗೆ ಕರೆ ಮಾಡಲು ಠಾಣಾಧಿಕಾರಿ ತಿಳಿಸಿದ್ದಾರೆ.

### ಐಟಿಐ ಪ್ರವೇಶಕ್ಕಾಗಿ ಅರ್ಜಿ

» **ದಾವಣಗೆರೆ**

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಚನ್ನಗಿರಿ ಇಲ್ಲಿ ಐಟಿಐ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಈ ಸಂಸ್ಥೆ ಎನ್‌ಸಿವಿಟಿ ಯಿಂದ ಸಂಯೋಜನೆ ಪಡೆದ ಎಲೆಕ್ಟ್ರೀಷಿಯನ್, ಫಿಟ್ಟರ್, ಎಂ.ಆರ್‌ಎಸ್ಸಿ, ಎಂ.ಇ.ವಿ ಮತ್ತು ಅಡ್ವಾನ್ಸ್ ಸಿಎನ್‌ಸಿ ವೃತ್ತಿಗಳಿದ್ದು ಈ ವೃತಿಗಳಿಗೆ ಸರ್ಕಾರಿ ಐಟಿಐ, ಚನ್ನಗಿರಿಯಲ್ಲಿ ಅಥವಾ ಹತ್ತಿರದ ಸೈಬರ್ ಸೆಂಟರ್ ನಲ್ಲಿ cite karnataka. gov.in ವೆಬ್‌ಸೈಟ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದು.

# ದೇಶಕ್ಕೆ ರಾಜೀವ ಗಾಂಧಿ ಕೊಡುಗೆ ಅಪಾರ

» **ಚಿತ್ರದುರ್ಗ**

ದೇಶ ಇಂದಿನ ದಿನಮಾನದಲ್ಲಿ ಮಾಹಿತಿ ತಂತ್ರಜ್ಞಾನ, ವಿಜ್ಞಾನದಲ್ಲಿ ಮುಂದುವರೆದಿದೆ ಎಂದರೆ ಅದಕ್ಕೆ ರಾಜೀವ ಗಾಂಧಿಯವರ ಕೊಡುಗೆ ಕಾರಣವಾಗಿದೆ ಎಂದು ಕಾಂಗ್ರೆಸ್‌ನ ರಾಜೀವಗಾಂಧಿ ಪಂಚಾಯತ್ ರಾಜ್ಯ ವಿಭಾಗದ ಅಧ್ಯಕ್ಷ ಅನಂತ ಕುಮಾರ್ ತಿಳಿಸಿದರು.

ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ರಾಜೀವಗಾಂಧಿಯವರ 33ನೇ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ರಾಜೀವಗಾಂಧಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ರಾಜೀವಗಾಂಧಿಯವರು ಸ್ಥಳಿಯ ನಾಯಕರುಗಳಿಂದಮಾತ್ರಸಮಸ್ಯೆಪರಿಹಾರ ಸಾಧ್ಯ ಇದೆ ಎಂದು ಅರಿತ್ತಿದ್ದ ಅವರು ಮೂರು ವಿಭಾಗಗಳಲ್ಲಿ ಪಂಚಾಯತ್‌ಗಳನ್ನು ವಿಭಾಗ ಮಾಡುವುದರ ಮೂಲಕ ಜನರಿಗೆ ಅಧಿಕಾರವನ್ನು ನೀಡಿದರು. ಅತಿ ಕಡಿಮೆ ವಯಸ್ಸಿನಲ್ಲಿಯೇ ದೇಶದ ಪ್ರಧಾನ ಮಂತ್ರಿಗಳಾಗಿ ದೇಶವನ್ನು ಮುನ್ನಡೆಸುವಲ್ಲಿ ಮಹತ್ತರವಾದ ಪಾತ್ರವನ್ನು ವಹಿಸಿದ್ದರು. ಅಂದಿನ ಕಾಲದಲ್ಲಿಯೇ ಭಾರತ ಪ್ರಪಂಚದಲ್ಲಿ ಹೆಸರು ಮಾಡಲು ರಾಜೀವಗಾಂಧಿಯವರುಕಾರಣರಾಗಿದ್ದಾರೆ ಎಂದು ತಿಳಿಸಿದರು.

ಅವರ ಅಧಿಕಾರ ಅವಧಿಯಲ್ಲಿ ಅಮೇರಿಕಕ್ಕೆ ನಮ್ಮ ದೇಶಕ್ಕೆ ಕಂಪ್ಯೂಟರನ್ನು ನೀಡುವಂತೆ ಮನವಿ ಮಾಡಿದರು ಆದರೆ ಇದನ್ನು ಅಮೇರಿಕಾ ತಿರಸ್ಕಾರ ಮಾಡಿತ್ತು, ಇದರಿಂದ ಅವರು ನಮ್ಮ ದೇಶದ ಇಂಜಿನಿಯರ್‌ಗಳನ್ನು ಒಟ್ಟುಗೂಡಿಸಿ ನಮ್ಮಲ್ಲಿಯೇ ಉತ್ತಮವಾದ ಕಂಪ್ಯೂಟರನ್ನು ನಿರ್ಮಾಣ ಮಾಡುವಂತೆ ಸೂಚನೆ ನೀಡಿ ಅದಕ್ಕೆ ಬೇಕಾದ ಸಹಾಯವನ್ನು ನೀಡಿದರು ಇದರಿಂದ ನಮ್ಮ ದೇಶದಲ್ಲಿಯೇ ಉತ್ತಮವಾದ ಕಂಪ್ಯೂಟರ್ ನಿರ್ಮಾಣವಾಯಿತು. ಇದೇ ದೇಶದಲ್ಲಿ ಯುವ ಜನತೆ ಹೆಚ್ಚಾಗಿದ್ದರಿಂದ ಅವರು ಸಹಾ ದೇಶದ ಪ್ರಗತಿಯಲ್ಲಿ ಸಹ ಭಾಗಿಗಳಾಗಬೇಕೆಂಬ ದೃಷ್ಟಿಯಲ್ಲಿ 21 ವಯಸ್ಸಿಗೆ ಇದ್ದ ಮತದಾನದ ಹಕ್ಕನ್ನು 18 ವಯಸ್ಸಿಗೆ ಇಳಿಸಲಾಯಿತು, ಇದರಿಂದ ಯುವಜನತೆಯೂ ಸಹಾ ದೇಶದ ಆಗು–ಹೋಗುಗಳಲ್ಲಿ ಸಕ್ರಿಯವಾಗಿ ಭಾಗವಹಿಸಲು ಅನುಕೂಲವಾಯಿತು ಎಂದು ಹೇಳಿದರು.




ಅವರ ಅಧಿಕಾರ ಅವಧಿಯಲ್ಲಿ ನಮ್ಮ ದೇಶದಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ತಂತ್ರಜ್ಞಾನಕ್ಕೆ ಹೆಚ್ಚಾಗಿ ಒತ್ತು ನೀಡಿದ್ದರಿಂದ ಅದು ನಮ್ಮ ದೇಶದಲ್ಲಿ ಹೆಚ್ಚಿನ ರೀತಿಯಲ್ಲಿ ಬೆಳೆಯಲು ಕಾರಣವಾಯಿತು, ಈಗ ದೇಶ ಇದರಲ್ಲಿ ಮುಂದುವರೆದಿದೆ ಎಂದರೆ ಅದಕ್ಕೆ ರಾಜೀವಗಾಂಧಿಯವರ ಕೂಡುಗೆ ಕಾರಣವಾಗಿದೆ ಇದನ್ನು ನಾವುಗಳು ಇಂದು ಸ್ಮರಣೆ ಮಾಡಬೇಕಿದೆ ಅಲ್ಲದೆ ಇದನ್ನು ಇಂದಿನ ಯುವ ಜನತೆಗೆ ತಿಳಿಸುವ ಕಾರ್ಯವನ್ನು ಮಾಡಬೇಕಿದೆ ಎಂದರು. ಡಿಸಿಸಿ ಪ್ರಧಾನ ಕಾರ್ಯದರ್ಶಿ ಮೈಲಾರಪ್ಪ ಮಾತನಾಡಿ, ರಾಜೀವಗಾಂಧಿಯವರು ದೇಶಕ್ಕಾಗಿ ತಮ್ಮ ಪ್ರಾಣವನ್ನೇ ನೀಡಿದ್ದಾರೆ, ಯುವಜನತೆಗೆ 18ಕ್ಕೆ ಮತದಾನ ಹಕ್ಕನ್ನು ನೀಡುವುದರ ಮೂಲಕ ಜವಾಬ್ದಾರಿಯನ್ನು ನೀಡಿದರು. ಇವರ ದೂರದೃಷ್ಟಿಯಿಂದ ಇಂದು ನಮ್ಮ ದೇಶದ ತಂತ್ರಜ್ಞಾನದಲ್ಲಿ ಮಹತ್ತರವಾದ ಸಾಧನೆಯನ್ನು ಮಾಡಿದೆ. ಈಗ ಬಿಜೆಪಿ ಮಾಡುತ್ತಿರುವ ಹೈವೆ ಅಂದಿನ ಕಾಲದಲ್ಲಿಯೇ ರಾಜೀವಗಾಂಧಿಯವರು ಮಾಡಿದ್ದರು, ಇದ್ದಲ್ಲದೆ ಮಹಿಳೆಯರು ಸಹಾ ರಾಜಕೀಯಕ್ಕೆ ಬರಬೇಕೆಂದು ಶೇ.33ರಷ್ಟು ಮೀಸಲಾತಿಯನ್ನು ಜಾರಿ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ತಿಳಿಸಿದರು.

ಡಿಸಿಸಿ ಅಧ್ಯಕ್ಷ ತಾಜ್‌ಪೀರ್ ಮಾತನಾಡಿ, ರಾಜೀವಗಾಂಧಿಯವರು ಚಿಕ್ಕ ವಯಸ್ಸಿನಲ್ಲಿಯೇ ಪ್ರಧಾನ ಮಂತ್ರಿಯಾಗುವುದರ ಮೂಲಕ ದೇಶವನ್ನು ಉನ್ನತ ಮಟ್ಟದಲ್ಲಿ ಕೊಂಡ್ಯೂದಿದ್ದಾರೆ. ಅವರು ದೇಶದ ಮಾಜಿ ಪ್ರಧಾನ ಮಂತ್ರಿ ಮೊಮ್ಮಗನಾಗಿ ಮಗನಾಗಿ ಇದ್ದರೂ ಸಹಾ ಯಾವುದೇ ರೀತಿಯ ಜಂಬ ಇಲ್ಲದೆ ಒಬ್ಬ ಪೈಲಟ್ ಆಗಿ ಕಾರ್ಯವನ್ನು ನಿರ್ವಹಿಸಿದ್ದರು, ತದ ನಂತರ ಕಾರ್ಯಕರ್ತರ ಒತ್ತಾಯದ ಮೇರೆಗೆ ರಾಜಕೀಯಕ್ಕೆ ಬಂದರು ಪ್ರದಾನ ಮಂತ್ರಿಗಳಾಗಿ ದೇಶವನ್ನು ಮುನ್ನಡೆಸಿದರು ಎಂದರು.ಪಂಚಾಯತ್ ನೀಡುವುದು ಗಾಂಧಿಜೀಯವರ ಕನಸಾಗಿತ್ತು ಅದನ್ನು ರಾಜೀವಗಾಂಧಿಯವರು ನನಸು ಮಾಡಿದರು. ಸ್ವಾತಂತ್ರ ಪೂರ್ವದಲ್ಲಿ ಹೋರಾಟವನ್ನು ಮಾಡುವುದರ ಮೂಲಕ ದೇಶವನ್ನು ಬ್ರಿಟಿಷರಿಮದ ಮುಕ್ತರಾಗಿ ಮಾಡಲಾಯಿತು, ಆಗ ಇರದ ಬಿಜೆಪಿ ಈಗ ಅದರ ಬಗ್ಗೆ ಮಾತನಾಡುತ್ತಿದೆ ಪ್ರಧಾನಮಂತ್ರಿಗಳು ಮಾತನಾಡುವಾಗ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಹಿಂದುಗಳ ತಾಳಿಯನ್ನು ಕಿತ್ತು ಅಲ್ಪಸಂಖ್ಯಾತರಿಗೆ ನೀಡುತ್ತಾರೆ ಎಂಬ ಮಾತಿಗೆ ಪ್ರಿಯಾಂಕಗಾಂಧಿಯವರು ತಕ್ಕ ಉತ್ತರವನ್ನು ನೀಡಿದ್ದಾರೆ ದೇಶಕ್ಕಾಗಿ ನಮ್ಮ ತಾಯಿಯವರು ತಮ್ಮ ತಾಳಿಯನ್ನು ನೀಡಿದ್ದಾರೆ ಹೊರೆತು ಬೇರೆಯವರ ತಾಳಿಯನ್ನು ಕಿತ್ತುಕೊಳ್ಳುವುದಿಲ್ಲ ಎಂದು ನೀಡಿದ್ದಾರೆ ಎಂದು ತಿಳಿಸಿದರು.

ಗ್ಯಾರೆಂಟಿ ಯೋಜನೆ ಸಮಿತಿ ಅಧ್ಯಕ್ಷ ಶಿವಣ್ಣ, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷರಾದ ಎನ್.ಡಿ.ಕುಮಾರ್, ಲೋಕೇಶ್ ಮುದಸಿರ್, ರವಿಕುಮಾರ್, ಶಬ್ಬೀರ್, ವಾಸಿಂ, ಪ್ರಕಾಶ್ ರಾಮನಾಯ್ಕ್, ಅಂಜಿನಪ್ಪ, ಲಕ್ಷ್ಮೀಕಾಂತ್ ಅಬ್ದುಲ್ ಮುದಸಿರ್ ಇದ್ದರು.

## ತಾಲ್ಲೂಕಿನಾದ್ಯಂತ ಕೃತಕಾ ಮಳೆಯ ಅಟ್ಟಹಾಸ

» ಮೊದಲ ಪುಟದಿಂದ

ಸೋಮವಾರ ತಡರಾತ್ರಿ ಬಡಿದ ಸಿಡಿಲಿಗೆ ಕೂಲಿಕಾರ್ಮಿಕ ಮಹಿಳೆ ಲಕ್ಷ್ಮಿ(60) ಸಾವನಪ್ಪಿದ್ದಾಳೆ.

ಕಳೆದ ಕೆಲವು ತಿಂಗಳುಗಳಿಂದ ಇವರು ಮಹಾರಾಷ್ಟ್ರದಿಂದ ಈ ಭಾಗಕ್ಕೆ ಕೂಲಿಕೆಲಸಕ್ಕೆ ಆಗಮಿಸಿದ್ದು ಕೆರೆಯಂಗಳದಲ್ಲಿ ಪುಟ್ಟಶೆಡ್ ಹಾಕಿಕೊಂಡು ಕಟ್ಟಿಗೆಸುಟ್ಟು ಇದ್ದಿಲು ಮಾಡುತ್ತಿದ್ದರು. ಮಳೆ ಬಂದ ಸಂದರ್ಭದಲ್ಲಿ ನೀರು ಶೆಡ್‌ಗೆ ನುಗ್ಗದಂತೆ ಲಕ್ಷ್ಮಿ ನೀರು ಎತ್ತಿಹೋರಹಾಕಲು ಬಂದ ಸಂದರ್ಭದಲ್ಲಿ ಸಿಡಿಲಿಗೆ ಬಲಿಯಾಗಿದ್ದಾಳೆ. ಮಹಾರಾಷ್ಟ್ರ ರಾಜ್ಯದ ರಾಯಗಡ ಜಿಲ್ಲೆಯ ರೋಹಾ ತಾಲ್ಲೂಕಿನ ಮಾಡೋಶಿಪ್ ಗ್ರಾಮದವರು ಎಂದು ತಿಳಿದು ಬಂದಿದೆ.



ಮಳೆಗೆ ಹಾನಿ :– ಸೋಮವಾರ ಬಿದ್ದ ಮಳೆಗೆ ಬುಡ್ನಹಟ್ಟಿ ಗ್ರಾಮದ ಕೆ.ಗಂಗಮ್ಮ ಎಂಬುವವರ ವಾಸದ ಮನೆ ಬಿದ್ದು ಸುಮಾರು 50 ಸಾವಿರ ನಷ್ಟವಾಗಿದೆ, ಕೋಡಿಹಳ್ಳಿ ಗ್ರಾಮದ ಗಂಗಮ್ಮ ಎಂಬುವವರ ವಾಸದ ಮನೆಗೆ ಬಿದ್ದು 40 ಸಾವಿರ ನಷ್ಟವಾಗಿದೆ. ಮಲ್ಲೂರಹಟ್ಟಿ ಗ್ರಾಮದ ತಿಪ್ಪಕ್ಕ ಎಂಬುವವರ ಮನೆ ಕುಸಿದು ಬಿದ್ದು 50 ಸಾವಿರ ನಷ್ಟ ಸಂಭವಿಸಿದೆ. ಅದೇ ಗ್ರಾಮದ ಶಂಕ್ರಮ್ಮ, ಸಣ್ಣಕ್ಕ ಎಂಬುವವರ ಮನೆಗಳು ಬಿದ್ದು ತಲಾ 30ಸಾವಿರ ನಷ್ಟ ಸಂಭವಿಸಿದೆ. ತಾಲ್ಲೂಕಿನ ಪರಶುರಾಮಪುರ ಹೋಬಳಿ ಚನ್ನಮ್ಮನಾಗತಿಹಳ್ಳಿ ಗ್ರಾಮದ ರಿ.ಸರ್ವೆ ನಂ. 74/5 2.2 ಎಕರೆ ಪ್ರದೇಶದಲ್ಲಿದ್ದ ಮಾರಣ್ಣ ಎಂಬುವವರಿಗೆ ಸೇರಿದ ಬಾಳೆ ತೋಟ ಗಾಳಿ, ಮಳೆಗೆ ಬಿದ್ದು ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ.

ಮಳೆ ಪ್ರಮಾಣ :– ಸೋಮವಾರ ರಾತ್ರಿ ಸುರಿದ ಮಳೆಯ ಪ್ರಮಾಣ ಚಳ್ಳಕೆರೆ–44, ಪರಶುರಾಮಪುರ–42.02, ನಾಯಕನಹಟ್ಟಿ–50.04, ತಳಕು–31.02, ದೇವರಮರಿಕುಂಟೆ–35.04 ಒಟ್ಟು 212.02 ಎಂ.ಎಂ. ಮಳೆಯಾಗಿದ್ದು, ಈವರೆಗೂ ಹಿಂದಿನ ಮಳೆ ಪ್ರಮಾಣ 348.02 ಸೇರಿ ಒಟ್ಟು 550.17 ಎಂ.ಎಂ ಮಳೆಯಾಗಿದೆ.



## ಮಳೆ ವರದಿ: ಸೂಗೂರಿನಲ್ಲಿ 108.6 ಮಿ.ಮೀ ಮಳೆ

» **ಚಿತ್ರದುರ್ಗ**

ಸೋಮವಾರ ರಾತ್ರಿ ಸುರಿದ ಮಳೆಗೆ ಹಿರಿಯೂರು ತಾಲ್ಲೂಕಿನ ಸೂಗೂರಿನಲ್ಲಿ 108.6 ಮಿ.ಮೀ ಮಳೆಯಾಗಿದೆ. ಇದು ಜಿಲ್ಲೆಯಲ್ಲಿ ಸುರಿದ ಅತ್ಯಧಿಕ ಮಳೆಯಾಗಿದೆ.

ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 54.4 ಮಿ.ಮೀ, ಇಕ್ಕನೂರಿನಲ್ಲಿ 68.4 ಮಿ.ಮೀ, ಈಶ್ವರಗೆರೆಯಲ್ಲಿ 51 ಮಿ.ಮೀ, ಬಬ್ಬೂರಿನಲ್ಲಿ 59.2ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗ–1ರಲ್ಲಿ 45.8 ಮಿ.ಮೀ, ಚಿತ್ರದುರ್ಗ–2ರಲ್ಲಿ 41.3 ಮಿ.ಮೀ ಭರಮಸಾಗರದಲ್ಲಿ 38.4ಮಿ.ಮೀ, ಹಿರೇಗುಂಟನೂರಿನಲ್ಲಿ 13.4ಮಿ.ಮೀ, ತುರುವನೂರಿನಲ್ಲಿ 28.6ಮಿ.ಮೀ, ಸಿರಿಗೆರೆ 28.8ಮಿ.ಮೀ ಹಾಗೂ ಐನಳ್ಳಿಯಲ್ಲಿ 36.2 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 72.6 ಮಿ.ಮೀ, ಬಾಗೂರು 55.5 ಮಿ.ಮೀ, ಮಾಡದಕೆರೆ 62 ಮಿ.ಮೀ, ಮತ್ತೋಡಿನಲ್ಲಿ 13.2 ಮಿ.ಮೀ ಹಾಗೂ ಶ್ರೀರಾಂಪುರದಲ್ಲಿ 45.2 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 30.6 ಮಿ.ಮೀ, ರಾಮಗಿರಿ 31.5ಮಿ.ಮೀ, ಚಿಕ್ಕಜಾಜೂರು 30.5 ಮಿ.ಮೀ, ಬಿ.ದುರ್ಗ 29.2 ಮಿ.ಮೀ, ಹೆಚ್.ಡಿ.ಪುರ 38.6 ಮಿ.ಮೀ ಮತ್ತು ತಾಳ್ಯದಲ್ಲಿ 6.2ಮಿ.ಮೀ ಮಳೆಯಾಗಿದೆ. ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 44 ಮಿ.ಮೀ, ಪರಶುರಾಂಪುರ 46.2ಮಿ.ಮೀ, ನಾಯಕನಹಟ್ಟಿ 50.4ಮಿ.ಮೀ, ತಳಕು 31.2ಮಿ.ಮೀ ಹಾಗೂ ಡಿ.ಮರಿಕುಂಟೆಯಲ್ಲಿ 35.4ಮಿ.ಮೀ ಮಳೆಯಾಗಿದೆ.

ಜಿಲ್ಲೆಯಾದ್ಯಂತ 34 ಮನೆ ಭಾಗಶಃ ಹಾನಿ, 11.48 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿ: ಸೋಮವಾರ ರಾತ್ರಿ ಸುರಿದ ಮಳೆಗೆ ಜಿಲ್ಲೆಯಾದ್ಯಂತ 34 ಮನೆಗಳು ಭಾಗಶಃ ಹಾನಿಯಾಗಿದ್ದು, 1 ದೊಡ್ಡ ಜಾನುವಾರು, 2 ಸಣ್ಣ ಜಾನುವಾರು ಹಾಗೂ 1 ಜೀವಹಾನಿಯಾಗಿದೆ. ಜಿಲ್ಲೆಯಾದ್ಯಂತ ಒಟ್ಟು 11.48 ಹೆಕ್ಟೇರ್ ತೋಟಗಾರಿಕೆ ಬೆಳೆನಾಶ ಮತ್ತು ಮೂರು ಮನೆಗಳಿಗೆ ನೀರು ನುಗ್ಗಿರುವ ಪ್ರಕರಣ ವರದಿಯಾಗಿದೆ.

ಚಿತ್ರದುರ್ಗ ತಾಲ್ಲೂಕಿನಲ್ಲಿ 5 ಮನೆಗಳು ಭಾಗಶಃ ಹಾನಿಯಾಗಿವೆ. ಚಳ್ಳಕೆರೆ ತಾಲ್ಲೂಕಿನಲ್ಲಿ ಭಾಗಶಃ 7 ಮನೆಹಾನಿ, 1 ದೊಡ್ಡ ಜಾನುವಾರು ಹಾಗೂ 1 ಜೀವಹಾನಿ ಹಾಗೂ 3 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ ಭಾಗಶಃ 4 ಮನೆಗಳು ಹಾನಿಯಾಗಿವೆ. ಹೊಸದುರ್ಗ ತಾಲ್ಲೂಕಿನಲ್ಲಿ 10 ಮನೆಗಳು ಭಾಗಶಃ ಹಾನಿ ಹಾಗೂ 2 ಸಣ್ಣ ಜಾನುವಾರು, 1 ಹೆಕ್ಟೇರ್ ತೋಟಗಾರಿಕೆ ಬೆಳೆ ಮತ್ತು 3 ಮನೆಗಳಿಗೆ ನೀರು ನುಗ್ಗಿರುವ ಕುರಿತು ಪ್ರಕರಣ ವರದಿಯಾಗಿದೆ. ಹಿರಿಯೂರು ತಾಲ್ಲೂಕಿನಲ್ಲಿ ಭಾಗಶಃ 5 ಮನೆಹಾನಿ ಮತ್ತು 7.48 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಭಾಗಶಃ 3 ಮನೆಗಳು ಹಾನಿಯಾಗಿವೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.




**ಅಹಮದ್ ಪ್ಯಾಲೆಸ್‌ನಲ್ಲಿ ನಡೆದ ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಾಗಾರವನ್ನು ಡಾ. ಜಿ. ಎನ್. ಸಂದೀಪ್ ಉದ್ಘಾಟಿಸಿದರು.**

## ಪ್ರಮುಖ ಸುದ್ದಿ

# ಜ್ಞಾನಗಂಗೋತ್ರಿ ಸ್ನಾತಕೋತ್ತರ ಕೇಂದ್ರದಲ್ಲಿ ಸ್ವಚ್ಛತಾ ಕಾರ್ಯ

» **ಚಿತ್ರದುರ್ಗ**

ತಾಲ್ಲೂಕಿನ ಗುಡ್ಡದರಂಗವ್ವನಹಳ್ಳಿಯ ದಾವಣಗೆರೆ ವಿಶ್ವವಿದ್ಯಾಲಯದ ಜ್ಞಾನಗಂಗೋತ್ರಿ ಸ್ನಾತಕೋತ್ತರ ಕೇಂದ್ರದಲ್ಲಿ ಎನ್‌ಎಸ್‌ಎಸ್ ಘಟಕ–1 ಮತ್ತು 2 ಹಾಗೂ ಐಮಂಗಲ ಪೊಲೀಸ್ ತರಬೇತಿ ಶಾಲೆಯಯ ಸಹಯೋಗದಲ್ಲಿ ಸ್ವಚ್ಛತಾ ಕಾರ್ಯಕ್ರಮ, ಹೊಸ ಅಪರಾಧಿಕ ಕಾನೂನುಗಳ ಅರಿವು ಮತ್ತು ಬಸವ ಜಯಂತಿ ಕಾರ್ಯಕ್ರಮ ನಡೆಯಿತು.

ಐಮಂಗಲ ಪೊಲೀಸ್ ತರಬೇತಿ ಶಾಲೆಯ ಉಪ ಪ್ರಾಂಶುಪಾಲರು ಹಾಗೂ ಡಿವೈಎಸ್‌ಪಿ ಪಿ.ಪರಶುರಾಮ ಮಾತನಾಡಿ, ವಿದ್ಯಾರ್ಥಿಗಳಿಗೆ ಜುಲೈ–2024ರಿಂದ ಹೊಸ ಕಾನೂನಿನ ವ್ಯವಸ್ಥೆಯು ಚಾಲ್ತಿಗೆ ಬರುತ್ತಿದ್ದು, ಅಪರಾಧಗಳಿಗೆ ಶಿಕ್ಷೆಯ ಸ್ವರೂಪಗಳ ಕುರಿತು ಅರಿವು ಮೂಡಿಸಿದರು.

ಪೊಲೀಸ್ ಇನ್ಸ್‌ಪೆಕ್ಟರ್ ಕೃಷ್ಣನಾಯ್ಕ್ ಮಾತನಾಡಿ, ಸ್ವಾತಂತ್ರ್ಯ ಪೂರ್ವದಲ್ಲಿ ಬ್ರಿಟಿಷ್ ಆಳ್ವಿಕೆಯ ಕಾಲದಲ್ಲಿನ ಕಾನೂನಿನ ವ್ಯವಸ್ಥೆಯು ಭಾರತೀಯ ವ್ಯಕ್ತಿಗಳಿಗೆ ಶಿಕ್ಷಿಸಲು ಅನುಕೂಲವಾಗುವಂತಹ ಕಾನೂನುಗಳನ್ನುಕೈಗೊಂಡಿದ್ದರು.ಸ್ವಾತಂತ್ರ್ಯ ಬಂದು ಮುಕ್ಕಾಲು ದಶಕ ಕಳೆದರೂ ಅದೇ ಹಳೆಯ ಕಾನೂನಿನ ಅಡಿಯಲ್ಲಿ ಕೆಲವು ಅಪರಾಧಗಳಿಗೆ ಶಿಕ್ಷೆಯನ್ನು ನೀಡುವುದು ಸಾಧ್ಯವಾಗುತ್ತಿರಲಿಲ್ಲ. ಅದಕ್ಕೆ ಸಂಬಂಧಿಸಿದಂತೆ ಹೊಸ ಕಾನೂನಿನ ವ್ಯವಸ್ಥೆಯನ್ನು ತರಲಾಗಿದೆ ಎಂದು ತಿಳಿಸಿದರು.



ನಿವೃತ್ತ ಪ್ರಾಧ್ಯಾಪಕ ಡಾ.ನಟರಾಜ್ ಅವರು, ಸೈಬರ್ ಅಪರಾಥಗಳು,ಸಿವಿಲ್ ಅಪರಾಧಗಳು, ಕ್ರಿಮಿನಲ್ ಅಪರಾಧಗಳ ಕುರಿತು ವಿದ್ಯಾರ್ಥಿಗಳಿಗೆ ತಿಳುವಳಿಕೆ ಹೇಳಿದರು. ಕಾನೂನಿನ ತಿಳುವಳಿಕೆ ಬರೀ ವಿದ್ಯಾರ್ಥಿಗಳಿಗೆ ಮಾತ್ರವಲ್ಲ ಅವರ ತಂದೆ–ತಾಯಿಯವರಿಗೂ ತಿಳಿದಿರಬೇಕಾದುದು ಅತ್ಯವಶ್ಯಕವಾಗಿರುತ್ತದೆ ಎಂದು ತಿಳಿಸಿದರು.

ವಕೀಲರಾದ ಮಹಮದ್ ಇಮ್ರಾನ್ ಅವರು, ಹೊಸ ಅಪರಾಧಿಕ ಕಾನೂನುಗಳ ಅರಿವು ಕುರಿತು ದೇಶದ್ರೋಹ ಅಪರಾಧಗಳಿಗೆ ಹೊಸ ಕಾಯಿದೆಯನ್ನು ತರಲಾಗಿದೆ. ಇದುವರೆವಿಗೂ ಇದ್ದಂತಹ ಕಾಯಿದೆಗಳಲ್ಲಿ ಅನ್ವಯಿಸದೇ ಇರುವ ಕಾನೂನುಗಳಿಗೆ ಹೊಸ ಸ್ವರೂಪ ಕೊಡಲಾಗಿದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಸ್ನಾತಕೋತ್ತರ ಅಧ್ಯಯನ ಕೇಂದ್ರದ ನಿರ್ದೇಶಕ ಡಾ.ಎಂ.ಯು.ಲೋಕೇಶ್ ಮಾತನಾಡಿ, ಸ್ನಾತಕೋತ್ತರ ಕೇಂದ್ರದಲ್ಲಿ ಸ್ವಚ್ಛತಾ ಕಾರ್ಯಕ್ರಮ, ಹೊಸ ಅಪರಾಧಿಕ ಕಾನೂನುಗಳ ಅರಿವು ಹಾಗೂ ಬಸವ ಜಯಂತಿ ಸೇರಿದಂತೆ ಮೂರು ಕಾರ್ಯಕ್ರಮಗಳನ್ನು ಆಯೋಜಿಸಿರುವುದು ತುಂಬಾ ಸಂತೋಷಕರವಾದ ಸಂಗತಿ. ವಿದ್ಯಾರ್ಥಿಗಳಿಗೆ ಹೊಸ ಕಾನೂನಿನ ಅರಿವು ತುಂಬಾ ಅಗತ್ಯವಾಗಿದೆ ಎಂದು ತಿಳಿಸಿದರ. ಬಸವಣ್ಣನವರ ತತ್ವಗಳನ್ನು ಆದರ್ಶವನ್ನಾಗಿಸಿಕೊಂಡು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಆರ್.ರೂಪೇಶ್ ಕುಮಾರ್, ಎನ್‌ಎಸ್‌ಎಸ್ ಘಟಕದ–2ರ ಕಾರ್ಯಕ್ರಮಾಧಿಕಾರಿ ಬಿ.ಟಿ.ನಿವೇದಿತ, ಎನ್‌ಎಸ್‌ಎಸ್ ಘಟಕ–1ರ ಕಾರ್ಯಕ್ರಮಾಧಿಕಾರಿ ಡಾ.ಎಂ.ಸುಂದರಂ ಹಾಗೂ ಜ್ಞಾನಗಂಗೋತ್ರಿ ಕೇಂದ್ರದ ಎಲ್ಲಾ ಅಧ್ಯಯನ ವಿಭಾಗಗಳ ಪ್ರಾಧ್ಯಾಪಕರು ಮತ್ತು

## ಫಾಸ್ಟ್ ನ್ಯೂಸ್

### ಇಂದು ವೀರಭದ್ರಸ್ವಾಮಿ ಭವ್ಯ ರಥೋತ್ಸವ





» **ಚಳ್ಳಕೆರೆ**

ನಗರದ ಗ್ರಾಮ ದೇವರು ಲಕ್ಷಾಂತರ ಭಕ್ತರ ಆರಾಧ್ಯ ದೈವ ನಂಬಿದ ಭಕ್ತರಿಗೆ ಶ್ರೇಯಸ್ಸನ್ನು ಸದಾಕಾಲ ನೀಡುವ ಶ್ರೀವೀರಭದ್ರಸ್ವಾಮಿಯ ಭವ್ಯರಥೋತ್ಸವ ಮೇ.22ರಂದು ವಿಜೃಂಭಣೆಯಿಂದ ನಡೆಯಲಿದ್ದು, ಈಗಾಗಲೇ ದೇವಸ್ಥಾನಕ್ಕೆ ಸಾವಿರಾರು ಸಂಖ್ಯೆಯ ಭಕ್ತರು ಆಗಮಿಸಿ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆಯುತ್ತಿದ್ಧಾರೆ. ದೇವಸ್ಥಾನದ ಆಡಳಿತ ಮಂಡಳಿ ಧರ್ಮದರ್ಶಿ ಗೌಡ್ರರಾಮಣ್ಣ, ಶಾನಭೋಗರು ಹಾಗೂ ಆಯಾಗಾರರು ಪ್ರತಿವರ್ಷದಂತೆ ಈ ವರ್ಷವೂ ರಥೋತ್ಸವವನ್ನು ಯಶಸ್ವಿಗೊಳಿಸಲು ಪೂರ್ವಸಿದ್ದತೆಯಲ್ಲಿ ತೊಡಗಿದ್ಧಾರೆ. ರಥೋತ್ಸವ ದಿನದಂದೇ ಬೆಳಗಿನ ಜಾವ ಅಗ್ನಿಕುಂಡ ಕಾರ್ಯಕ್ರಮ ನಡೆಯಲಿದ್ದು, ಹರಕೆ ಹೊತ್ತ ಭಕ್ತರು ಬೆಳಗಿನ ಜಾವ ನಡೆಯುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಕೆಂಡ ಹಾಯುವ ಮೂಲಕ ತಮ್ಮ ಹರಿಕೆ ಪೂರೈಸುವರು. ಅಗ್ನಿಕುಂಡ ಕಾರ್ಯಕ್ರಮವನ್ನು ವೀಕ್ಷಿಸಲು ಸುತ್ತಮುತ್ತಲ ಸಾವಿರಾರು ಸಂಖ್ಯೆಯ ಭಕ್ತರು ದೇವಸ್ಥಾನದ ಬಳಿ ಜಮಾಯಿಸಿರುತ್ತಾರೆ. ಮೇ.22ರ ಬುಧವಾರ ಸ್ವಾಮಿಯ ದೊಡ್ಡ ರಥೋತ್ಸವ ನಡೆಯಲಿದ್ದು, ಈ ಕಾರ್ಯಕ್ರಮದಲ್ಲೂ ಸಾವಿರಾರು ಸಂಖ್ಯೆಯ ಭಕ್ತರು ಭಾಗವಹಿಸುವರು. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಸೇರಿದಂತೆ ಹಲವಾರು ಗಣ್ಯರು ಪಾಲ್ಗೊಳ್ಳಲಿದ್ದಾರೆ. ಭವ್ಯವಾದ ರಥದಲ್ಲಿ ಶ್ರೀಸ್ವಾಮಿಯ ಉತ್ಸವ ಮೂರ್ತಿಯನ್ನು ಬುಧವಾರ ಮಧ್ಯಾಹ್ನ ಪ್ರತಿಷ್ಠಾಪಿಸಿದ ನಂತರ ಸ್ವಾಮಿಯ ತೇರು ಮುಂದೆ ಸಾಗಲಿದೆ. ಇದಕ್ಕೂ ಮುನ್ನ ದೇವರ ಮುಕ್ತಿಬಾವುಟ ಹರಾಜು ಕಾರ್ಯಕ್ರಮ ನಡೆಯುವುದು. ಈ ಬಾರಿ ಶ್ರೀಸ್ವಾಮಿಯ ಧಯದಿಂದ ನಗರವೂ ಸೇರಿದಂತೆ ತಾಲ್ಲೂಕಿನಾದ್ಯಂತ ಉತ್ತಮ ಮಳೆಯಾಗಿದ್ದು, ರಥೋತ್ಸವ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುವ ನಿರೀಕ್ಷೆ ಇದೆ. ದೇವಸ್ಥಾನದ ಪ್ರಾಕಾರದಲ್ಲಿ ಭಕ್ತರನ್ನು ನಿಯಂತ್ರಿಸಲು ಡಿವೈಎಸ್ಪಿ ರಾಜಣ್ಣ ಮಾರ್ಗದರ್ಶನದಲ್ಲಿ ನಿವೃತ್ತ ನಿರೀಕ್ಷಕ ಕೆ.ಕುಮಾರ್ ಮತ್ತು ಸಿಬ್ಬಂದಿ ವರ್ಗ ಸ್ಥಳದಲ್ಲೇ ಹಾಜರಿದ್ದು ಬಂದೋಬಸ್ತ್ ಕಾರ್ಯನಿರ್ವಹಿಸುತ್ತಿದ್ಧಾರೆ.

### ವ್ಯಕ್ತಿ ಕಾಣೆ: ಪತ್ತೆಗೆ ಮನವಿ

» **ದಾವಣಗೆರೆ**

ದಾವಣಗೆರೆ ಯಲ್ಲಮ್ಮ ನಗರದ 4ನೇ ಮೇನ್ 7ನೇ ಕ್ರಾಸ್ ವಾಸಿಯಾದ ಕುಮಾರ್ ತಂದೆ ಲೇಟ್ ಪಕ್ಕೀರಪ್ಪ 37 ವರ್ಷ ಇವರು 2024 ಏಪ್ರಿಲ್ 25 ರಂದು ಗಂಡ ಹೆಂಡತಿ ಮಧ್ಯೆ ಆಸ್ತಿ ವಿಚಾರವಾಗಿ ಇದುವರೆಗೂ ಮನೆಗೆ ವಾಪಸ್ ಬಂದಿರುವುದಿಲ್ಲ. ಚಹರೆ ವಿವರ: 5.6 ಅಡಿ ಎತ್ತರ, ಕೋಲು ಮುಖ, ಗೋಧಿ ಮೈ ಬಣ್ಣ, ಸಾಧರಣ ಮೈ ಕಟ್ಟು, ಎಡ ಕೈ ಹಳೆಯ ಗಾಯದ ಗುರುತು ಇರುತ್ತದೆ. ಕನ್ನಡ ಭಾಷೆ ಮಾತನಾಡುತ್ತಾನೆ. ಇವರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಪಿ.ಜೆ ಬಡಾವಣೆ ಪೊಲೀಸ್ ಠಾಣೆ ದೂ.ಸಂ: 08192-272012, 08192-259213, 08192-253400, 08192-253100 ಗೆ ಕರೆ ಮಾಡಲು ಠಾಣಾಧಿಕಾರಿ ತಿಳಿಸಿದ್ದಾರೆ.

### ಅತಿಥಿ ಉಪನ್ಯಾಸಕ ಹುದ್ದೆಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಅಲ್ಪಸಂಖ್ಯಾತರ ಕಲ್ಯಾಣ. ಇಲಾಖೆ ವತಿಯಿಂದ 2024-25 ನೇ ಸಾಲಿಗೆ ಡಾ। ಎ.ಪಿ.ಜೆ ಅಬ್ದುಲ್ ಕಲಾಂ ಪದವಿ ಪೂರ್ವ ವಸತಿ ಕಾಲೇಜು, ಕೊಂಡಜ್ಜಿ ಗ್ರಾಮ ಇಲ್ಲಿ ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ ಪಿ.ಸಿ.ಎಂ.ಬಿ ವಿಷಯಗಳಿಗೆ ಆಂಗ ಮಾಧ್ಯಮದಲ್ಲಿ ಬೋಧಿಸಲು ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಇಂಗ್ಲೀಷ್ ಉಪನ್ಯಾಸಕರು ಹುದ್ದೆ ಸಂಖ್ಯೆ-1, ಗಣಿತ ಉಪನ್ಯಾಸಕರು ಹುದ್ದೆ ಸಂಖ್ಯೆ-1, ಭೌತಶಾಸ್ತ್ರ ಉಪನ್ಯಾಸಕರು ಹುದ್ದೆ ಸಂಖ್ಯೆ-1, ರಸಾಯನ ಶಾಸ್ತ್ರ ಉಪನ್ಯಾಸಕರ ಹುದ್ದೆ ಸಂಖ್ಯೆ-1 ಹುದ್ದೆಗೆ ಎಂ.ಎಸ್ಸಿ ಮತ್ತು ಬಿ.ಎಡ್ ವಿದ್ಯಾರ್ಹತೆಯನ್ನು ಹೊಂದಿರಬೇಕು. ಅರ್ಹ ಅಭ್ಯರ್ಥಿಗಳು ಮೇ.30 ರೊಳಗಾಗಿ ವಸತಿ ಕಾಲೇಜಿನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ:9008815296, 8970159714 ನ್ನು ಸಂಪರ್ಕಿಸಬಹುದು.

# ಕಾರ್ಮಿಕರ ಮಕ್ಕಳಿಗೆ ಉಚಿತ ಶಿಕ್ಷಣ: ಡಾ.ವಿರೇಶ್

» **ಚಿತ್ರದುರ್ಗ**




ನನ್ನ ವಿದ್ಯಾಸಂಸ್ಥೆಯಲ್ಲಿ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಸಾಧ್ಯವಾದಷ್ಟು ಉಚಿತವಾದ ಶಿಕ್ಷಣವನ್ನು ನೀಡಲಾಗುವುದು ಎಂದು ಬಾಪೂಜಿ ಸಮೂಹ ಸಂಸ್ಥೆ ಹಾಗೂ ಶರಣ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾದ ಡಾ.ಕೆ.ಎಂ.ವಿರೇಶ್ ಭರವಸೆ ನೀಡಿದರು.

ಭಾರತ ಕಮ್ಯೂನಿಸ್ಟ್ ಪಕ್ಷ, ಎ.ಐ.ಟಿ.ಯು.ಸಿ. ಚಿತ್ರದುರ್ಗ ಜಿಲ್ಲಾ ಕಾರ್ಮಿಕರ ಸಾಮೂಹಿಕ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿಯ ಎಐಟಿಯುಸಿ ಕಚೇರಿ ಮುಂಭಾಗದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ 47ನೇ ಹುತ್ಮಾತರ ಕಾರ್ಮಿಕರ ಮೇ ದಿನಾಚರಣೆ ಕಾರ್ಯಕ್ರಮದ ಬಹಿರಂಗ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಒಬ್ಬ ವ್ಯಕ್ತಿ ತನಗೆ ಆದ ಅವಮಾನ ಆದಾಗ ಮುಂದಿನ ದಿನದಲ್ಲಿ ಸನ್ಮಾನವಾಗುತ್ತದೆ ಕಷ್ಟಗಳು ಬಂದಾಗ ಮುಂದಿನ ದಿನದಲ್ಲಿ ಸುಖ ಬರುತ್ತದೆ ಅದಕ್ಕಾಗಿ ಕಾಯಬೇಕಿದೆ. ನನ್ನ ವಿದ್ಯಾ ಸಂಸ್ಥೆಯಲ್ಲಿ 1 ರಿಂದ 10ನೇ ತರಗತಿ ಸೇರಿದಂತೆ ಇತರೆ ಶಿಕ್ಷಣ ಸಂಸ್ಥೆಗಳನ್ನು ನಡೆಸಲಾಗುತ್ತದೆ ಇದರಲ್ಲಿ 1 ರಿಂದ 10ನೇ ತರಗತಿಯವರೆಗೂ ಕಾರ್ಮಿಕ ಮಕ್ಕಳಿಗೆ ಸಾಧ್ಯವಾದಷ್ಟು ಉಚಿತವಾದ ಶಿಕ್ಷಣವನ್ನು ನೀಡಲಾಗುವುದು ಎಂದು ಭರವಸೆ ನೀಡಿದರು.

ಸರ್ಕಾರಗಳು ಶಿಕ್ಷಣ ನೀತಿಯನ್ನು ಜಾರಿ ಮಾಡಿದಾಗ ಮಾತ್ರ ಎಲ್ಲಾ ಮಕ್ಕಳು ಸಹಾ ಉತ್ತಮವಾದ ಶಿಕ್ಷಣವನ್ನು ಪಡೆಯಲು ಸಾಧ್ಯವಿದೆ ಆದರೆ ಇದರ ಬಗ್ಗೆ ಸರ್ಕಾರವಾಗಲಿ ಜನ ಪ್ರತಿನಿಧಿಗಳಾಗಲು ಗಮನ ನೀಡುತ್ತಿಲ್ಲ ಇದು ಜಾರಿಯಾದಾಗ ಮಾತ್ರ ಬಡವರ ಮಕ್ಕಳು ಸಹಾ ಡಾಕ್ಟರ್ ಇಂಜಿನಿಯರ್ ಆಗಲು ಸಾಧ್ಯವಿದೆ ಎಂದರು.ಈ ಹಿಂದೆ ಹಲವಾರು ಕೈಗಾರಿಕೆಗಳು ಹೆಚ್ಚಾಗಿದ್ದವು ಅಗ ಕಾರ್ಮಿಕರು ಹೆಚ್ಚಾಗಿದ್ದರು ಇದರಿಂದ ಕಾರ್ಮಿಕ ಸಂಘಟನೆಗಳು ಉತ್ತಮವಾದ ಕೆಲಸವನ್ನು ಮಾಡುವುದರ ಮೂಲಕ ಕಾರ್ಮಿಕರ ಹಿತವನ್ನು ಕಾಯುತ್ತಿದ್ದರು ಆದರೆ ಈಗ ಕೈಗಾರಿಕೆಗಳು ಇಲ್ಲವಾಗಿ ಕಾರ್ಮಿಕರು ಸಹಾ ಬೀದಿಪಾಲಾಗಿದ್ದಾರೆ. ಇದರಿಂದ ಸಂಘಟನೆಗಳು ಸಹಾ ಕಡಿಮೆಯಾಗಿವೆ ಆದರೂ ಸಹಾ ಕೆಲವು ಸಂಘಟನೆಗಳು ಕಾರ್ಮೀಕರ ಪರವಾಗಿ ಕೆಲಸವನ್ನುಮಾಡುತ್ತಿವೆ ಎಂದು ತಿಳಿಸಿದರು. ಎಪಿಎಂಸಿ ಹಮಾಲರ ಸಂಘದ ಅಧ್ಯಕ್ಷ ಬಿ.ಬಸವರಾಜಪ್ಪ ಮಾತನಾಡಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೈತ ಮತ್ತು ಕಾರ್ಮಿಕರ ವಿರುದ್ದ ಕಾನೂನುಗಳನ್ನು ಜಾರಿ ಮಾಡಿವುದರ ಮೂಲಕ ವಿರೋಧಿಗಳಾಗಿವೆ. ಕಾರ್ಮಿಕರ ಪರವಾಗಿ ಕಾನೂನುಗಳನ್ನು ಜಾರಿ ಮಾಡುವುದರ ಬದಲಾಗಿ ಶ್ರೀಮಂತರ ಪರವಾಗಿ ಕಾನೂನುಗಳನ್ನು ಜಾರಿ ಮಾಡಿ ಅವರ ಪರವಾಗಿ ಕೆಲಸ ಮಾಡುತ್ತಿದೆ ಎಂದರು. ಎಐಟಿಯುಸಿಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಸುರೇಶ್ ಬಾಬು ಮಾತನಾಡಿ, ದೇಶದಲ್ಲಿ ಅಧಿಕಾರವನ್ನು ನಡೆಸುತ್ತಿರುವ ಬಿಜೆಪಿ ಸರ್ಕಾರ ಸುಳ್ಳನ್ನು ಹೇಳುವುದರ ಮೂಲಕ ಆಧಿಕಾರವನ್ನು ನಡೆಸುತ್ತಿದೆ. ಇದರ ಬಗ್ಗೆ ಮತದಾರರಿಗೆ ಮಾಹಿತಿಯನ್ನು ನೀಡಬೇಕಿದೆ. ಚುನಾವಣೆ ಸಮಯದಲ್ಲಿ ಪ್ರಧಾನ ಮಂತ್ರಿಗಳು ಮಾತ್ರ ಹಿಂದುಳಿದ ವರ್ಗಗಳ ಮೇಲೆ ಕರುಣೆ ಬಂದಿದೆ ಈಗ ಮಾತ್ರ ಅವರ ಮೇಲೆ ಪ್ರೀತಿ ಬಂದಿದೆ. ದೇಶದಲ್ಲಿ ಕೋಮುವಾದಿ ಪಕ್ಷಗಳು ತೊಲಗಬೇಕಿದೆ. ಎಂದ ಅವರು ಮುಂದಿನ ದಿನಮಾನದಲ್ಲಿ ಬರುವ ನಗರಸಭೆಯ ಚುನಾವಣೆಯಲ್ಲಿ ಎಲ್ಲಾ ವಾರ್ಡಗಳಿಗೆ ಸಹಾ ಕಮುನಿಸ್ಟ್ ಪಕ್ಷದವತಿಯಿಂದ ಅಭ್ಯರ್ಥಿಗಳನ್ನು ಹಾಕಲಾಗುವುದು ಎಂದು ತಿಳಿಸಿದರು.ಇದೇ ಸಂದರ್ಭದಲ್ಲಿ ಗೌರವ ಡಾಕ್ಟರೇಟ್ ಪದವಿಯನ್ನು ಪಡೆದ ಬಾಪೂಜಿ ಸಮೂಹ ಸಂಸ್ಥೆಗಳು ಹಾಗೂ ಶರಣ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾದ ಡಾ.ಕೆ.ಎಂ.ವಿರೇಶ್ ರವರನ್ನು ಅಭಿನಂದಿಸಲಾಯಿತು.ರಾಜ್ಯ ಮಂಡಳಿ ನಾಯಕರಾದ ಅಮ್ಜದ್, ಎಐಟಿಯುಸಿಯ ಜಿಲ್ಲಾ ಮಂಡಳಿಯ ಗೌರವಾಧ್ಯಕ್ಷರಾದ ಸಿ.ವೈ.ಶಿವರುದ್ರಪ್ಪ, ಸಿಪಿಐ ಜಿಲ್ಲಾ ಸಹ ಕಾರ್ಯದರ್ಶಿ ದೊಡ್ಡ ಉಳ್ಳಾರ್ತಿ ಕರಿಯಣ್ಣ, ಎಐಟಿಯುಸಿಯ ರಾಜ್ಯ ಉಪಾಧ್ಯಕ್ಷರಾದ ಟಿ.ಆರ್.ಉಮಾಪತಿ, ತಾಲ್ಲೂಕು ಸಹ ಕಾರ್ಯದರ್ಶಿಗಳಾದ ಜಯದೇವ ಮೂರ್ತಿ ಜಾಫರ್ ಷರೀಫ್, ಕುಮಾರಸ್ವಾಮಿ, ದುರುಗೇಶ್, ನಾಗಮ್ಮ ಲಕ್ಷ್ಮಮ್ಮ, ಚೌಡಪ್ಪ, ನಾಗರಾಜ್, ಸತ್ಯಕೀರ್ತಿ ಸೇರಿದಂತೆ ಇತತರು ಭಾಗವಹಿಸಿದ್ದರು. ಇದಕ್ಕೂ ಮುನ್ನಾ ಬೆಳಿಗ್ಗೆ 9 ಗಂಟೆಯಿಂದ ಎಐಟಿಯುಸಿ ಕಚೇರಿಯಿಂದ ಮೆರವಣಿಗೆ ನಡೆಸಲಾಯಿತು.

# ಸೊರಗಿದ್ದ ಪ್ರಕೃತಿ ಜತೆ ಮಳೆ ತಂದ ಜೀವಕಳೆ

» **ಮಹದೇವಪುರ ಶಿವಮೂರ್ತಿ**







ಪರಶುರಾಂಪುರ-ಬಿರು ಬೇಸಿಗೆಯ ಬಿಸುಲಿಗೆ ಸೊರಗಿದ್ದ ಜನತೆ ಹಾಗೂ ಪ್ರಕೃತಿಗೆ ಕೆಲಾ ಅವಾಂತರಗಳ ನಡುವೆ ಕಳೆದೆರಡು ದಿನಗಳಿಂದ ಬರುತ್ತಿರುವ ಮಳೆಯಿಂದ ಸೊರಗಿದ್ದ ಪ್ರಕೃತಿಗೆ ಜೀವಕಳೆ ಬಂದಂತಾಗಿದೆ.

ಹೋಬಳಿ ವ್ಯಾಪ್ತಿಯಲ್ಲಿ ಸೋಮವಾರ ಹದ ಮಳೆಯೊಂದಿಗೆ ನಷ್ಟದೊಂದಿಗಿರುವ ಜನರಿಗೆ ಜಲರಾಶಿಯನ್ನ ಕಂಡು ಜನರು ಪುಳಕಿತರಾಗಿದ್ದಾರೆ.

ಮಳೆಯಿಂದ ಉಂಟಾದ ಅವಾಂತರ-ಸೋಮವಾರ ಸುರಿದ ಮಳೆಯಿಂದಾಗಿ ಕ್ಯಾದಿಗುಂಟೆ ಗ್ರಾಮದ ಹನುಮಕ್ಕ,ಚನ್ನವ ್ಮನಾಗತಿಹಳ್ಳಿಯ ಟಿ.ವಿ.ರಾಜಶೇಖರ್,ಪಿಲ್ಲಹಳ್ಳಿ ಗ್ರಾಮದ ಅಶ್ವಥ್ ನಾರಾಯಣ ಎಂಬುವವರಿಗೆ ಸೇರಿದ ಮನೆಗಳಿಗೆ ಹಾನಿಯಾಗಿದೆ.ಜತೆಗೆ ಚನ್ನಮ್ಮನಾಗತಿಹಳ್ಳಿಯ ರೈತ ಮಾರಣ್ಣ ಅವರಿಗೆ ಸೇರಿದ ಬಾಳೆ ತೋಟಕ್ಕೆ ಗಾಳಿ ಮಳೆಗೆ ಅಪಾರ ನಷ್ಟ ಉಂಟಾಗಿದೆ.

ರಸ್ತೆಯಲ್ಲಿ ಮಳೆಗೆ ನೀರು ಸಂಗ್ರಹ ನಿವಾಸಿಗಳಿಗೆ ತೊಂದರೆ-ಸಿದ್ದೇಶ್ವರನದುರ್ಗ ಗ್ರಾಮದಲ್ಲಿ ಸಣ್ಣ ಮಳೆ ಬಂದರೂ ರಸ್ತೆಯಲ್ಲಿ ನೀರು ಸಂಗ್ರಹಗೊಂಡ ಓಡಾಡಲು ತೊಂದರೆ ಜತೆ ಅಕ್ಕಪಕ್ಕದ ಮನೆಯ ಒಳಗೆ ನೀರು ನುಗ್ಗು ಸಂಭವ ಉಂಟಾಗುವುದರಿಂದ ನಿವಾಸಿಗಳು ಆತಂಕದಲ್ಲಿದ್ದಾರೆ.ತುಂಬಿ ಹರಿಯುತ್ತಿರುವ ಚೆಕ್ ಡ್ಯಾಂಗಳು-ರೈತರ ಜೀವನಾಡಿಯಾಗಿರುವ ವೇದಾವತಿ ತೊರೆಯಲ್ಲಿ ಹರಿಯುತ್ತಿರುವ ನೀರಿನ ರಮಣೀಯವಾದ ದೃಶ್ಯ ಕಣ್ಮನ ಸೆಳೆಯುತ್ತಿದೆ.ಹಿರಿಯೂರು,ಹೊಸದುರ್ಗ ಸೇರಿದಂತೆ ಮೇಲ್ಭಾಗದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾದ್ದರಿಂದ ಹೋಬಳಿ ಭಾಗದಲ್ಲಿನ ಚೆಕ್ ಡ್ಯಾಂಗಳು ನೀರಿನಿಂದ ಜುಳುಜುಳು ಹಾಗೂ ಭೋರ್ಗರೆಯುವ ಶಬ್ದದೊಂದಿಗೆ ತುಂಬಿ ಹರಿಯುತ್ತಿದೆ.ಸಾಮಾಜಿಕ ಜಾಲತಾಣಗಳಲ್ಲಿ ಮಳೆ ನೀರಿನದೆ ಸದ್ದು-ಕೃಷಿ ಕಾರ್ಯ,ತೋಟದ ಸೊಬಗು, ವಾಹನಗಳಲ್ಲಿ ಸಂಚರಿಸುವಾಗ ಸೆರೆ ಹಿಡಿದ ಮಳೆಯು ದೃಶ್ಯ.ತುಂಬಿ ಹರಿಯುತ್ತಿರುವ ಚೆಕ್ ಡ್ಯಾಂನ ಸೆಲ್ಫಿ ಫೋಟೋ ವಿಡಿಯೋ,ಜಮೀನು, ತೋಟಗಳಲ್ಲಿ ನಿಂತು ನೀರು,ಹಳ್ಳಕೊಳ್ಳಗಳಲ್ಲಿ ಹರಿಯುವ ನೀರಿನ ಫೋಟೋ ಹೀಗೆ ನೀರಿನ ಹತ್ತಾರು ಚಿತ್ರಗಳ ಸದ್ದು ಸಾಮಾಜಿಕ ಜಾಲತಾಣಗಳಲ್ಲಿ ಜೋರಾಗಿದೆ.

ಮೂರು,ಗಿಡಗಳಿಗೆ ನವಚೈತನ್ಯ ತುಂಬಿದ ಮಳೆ-ಬಿಸಿಲಿನ ತಾಪದಿಂದ ಮರಗಿಡಗಳು ಒಣಗುತ್ತಿದ್ದವು.ಮಳೆಯಿಂದಾಗಿ ಅರಣ್ಯ ಹಾಗೂ ರಸ್ತೆ ಬದಿಯ ಮರ,ಗಿಡಗಳು ಹೊಸ ಚಿಗುರುನೊಂದಿಗೆ ನವಚೈತನ್ಯ ತುಂಬಿ ನಳನಳಿಸುತ್ತಿರುವುದು ಸಾಕ್ಷಿಯಾಗಿದೆ.

# ಆಗ್ನೇಯ ಶಿಕ್ಷಕ ಕ್ಷೇತ್ರದ ಕಾಂಗ್ರೆಸ್ ಪ್ರಚಾರ ಸಭೆ



» **ಹೊಳಲ್ಕೆರೆ**

ಸರಕಾರದ ಗ್ಯಾರಂಟಿ ಹಣದಿಂದ ರಾಜ್ಯದ ಬಡವರ ಮನೆಗಳಲ್ಲಿ ಜ್ಯೋತಿ ಬೆಳಗುತ್ತಿದೆ ಎಂದು ಮಾಜಿ ಸಚಿವ ಹೆಚ್.ಆಂಜನೇಯ ತಿಳಿಸಿದರು.

ಅವರು ಪಟ್ಟಣದ ಸ್ನೇಹ ಕಂಪರ್ಟ್ ನಲ್ಲಿ ಕಾಂಗ್ರೆಸ್ ಪಕ್ಷ ಆಯೋಜಿಸಿದ ವಿಧಾನ ಪರಿಷತ್ ಚುನಾವಣೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಶ್ರೀನಿವಾಸ್ ಪರ ಕೈಗೊಂಡ ಪ್ರಚಾರ ಸಭೆ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಕರ ಯಾವುದೇ ಸಮಸ್ಯೆ ಪರಿಹರಿಸುವ ಶಕ್ತಿ ನಮ್ಮ ಸರಕಾರಕ್ಕೆ ಇದೆ. ಶಿಕ್ಷಕರು ಚುನಾವಣೆಯಲ್ಲಿ ಸರಕಾರಕ್ಕೆ ಬೆಂಬಲಿಸಬೇಕು. ಅದಕ್ಕೆ ಪ್ರತಿಫಲವಾಗಿ ಸೌಲಭ್ಯಗಳನ್ನು ಕೇಳಿ ಪಡೆದುಕೊಳ್ಳಬೇಕು. ಈ ಬಾರಿ ಶಿಕ್ಷಕರು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಶ್ರೀ ನಿವಾಸಗೆ ಬೆಂಬಲಿಸಿ ಗೆಲ್ಲಿಸಿಕೊಂಡಬರಬೇಕೆಂದರು.

ಅಗ್ನೇಯ ಶಿಕ್ಷಕರ ಕ್ಷೇತ್ರದಲ್ಲಿ ಈಭಾರಿ ಶಿಕ್ಷಕರು ಕಾಂಗ್ರೆಸ್ ಪಕ್ಷದ ಪರವಾಗಿದ್ದಾರೆ. ಶಿಕ್ಷಕರ ಕ್ಷೇತ್ರಕ್ಕೆ ಯಾವುದೇ ಕೊಡುಗೆ ನೀಡದ ವೈ.ಎ.ನಾರಾಯಣಸ್ವಾಮಿಯನ್ನು ಈ ಬಾರಿ ಸೋಲಿಸಲು ಶಿಕ್ಷಕರು ಈಗಾಗಲೆ ಎಲ್ಲಾ ಕಡೆಯಲ್ಲಿ ಶಪಥ ಮಾಡಿದ್ದಾರೆ ಎಂದರು.

ಮಾಜಿ ಶಾಸಕಿ ಪೂರ್ಣಿಮಾ ಮಾತನಾಡಿ, ಕಾಂಗ್ರೆಸ್ ಪಕ್ಷದ ಸರಕಾರ ಕೂಡಲೆ ಹಳೆಯ ಪಿಂಚಣಿ ಯೋಜನೆ ಜಾರಿಗೆ ತರುತ್ತದೆ. ನೌಕರರ ಪರವಾಗಿದೆ ಸರಕಾರ. ಬಿಜೆಪಿರ ಸರಕಾರ ನೌಕರರ ವಿರೋಧಿ ನೀತಿ ನಿಯಮ ಜಾರಿಗೆ ತಂದಿತ್ತು. ಈಗಿನ ಸರಕಾರ ಎಲ್ಲಾ ಸಮಸ್ಯೆಗೆ ಮುಕ್ತಿ ನೀಡಿ ಉತ್ತಮ ಸೌಲಭ್ಯಗಳನ್ನು ಕೊಡಲಿದೆ. ಶಿಕ್ಷಕರ ಎಲ್ಲಾ ಬೇಡಿಕೆ ಈಡೇರಿಸಲು ಮುಖ್ಯಮಂತ್ರಿಗಳು ಭರವಸೆ ನೀಡಿದ್ದಾರೆ. ಪಕ್ಷದ ಪ್ರಣಾಳಿಕೆ ಜತೆ 7 ನೇ ವೇತನ ವರದಿ, ಹಳೆಯ ಪಿಂಚಣಿ, ಕಾಲಮೀತಿ ಭಡ್ತಿ ನೀಡಲಿದ್ದು, ಸರಕಾರಕ್ಕೆ ಬೆಂಬಲಿಸಲು ನಮ್ಮ ಅಭ್ಯರ್ಥಿ ಗೆಲ್ಲಿಸಿ ಸರಕಾರ ಶಿಕ್ಷಕರ ಪರವಾಗಿ ಕೆಲಸ ಮಾಡಲು ಶಕ್ತಿ ನೀಡಬೇಕೆಂದರು.

## ಪ್ರಮುಖ ಸುದ್ದಿ

# ಮಳೆ: ಕಿತ್ತು ಹೋದ ರಾಷ್ಟ್ರೀಯ ಹೆದ್ದಾರಿ ರಸ್ತೆ ಸಂಚಾರ ದುಸ್ತರ

» **ಮೊದಲ ಪುಟದಿಂದ**





ಕಳೆದ ಮೂರು ದಿನಗಳಿಂದ ಬಂದ ಅಬ್ಬರ ಮಳೆಗೆ ತಾಲೂಕಿನಲ್ಲಿ ಸಾಕಷ್ಟು ತೊಂದರೆಗಳು ಆಗಿವೆಯಾದರೂ ರೈತರ ಪಾಲಿಗೆ ಸದ್ಯ ಈಗಲಾದರೂ ಸಂವೃದ್ಧವಾದ ಮಳೆ ಬಂದಿದೆ ಎಂಬುದು ನಮ್ಮದಿಯ ವಿಷಯವಾಗಿದೆ.ಹೊಸದುರ್ಗ ಪಟ್ಟಣದ ನೂತನ ಪ್ರವಾಸಿ ಮಂದಿರದ ಮುಂದೆ ಆದು ಹೋಗುವ ರಾಷ್ಟ್ರೀಯ ಹೆದ್ದಾರಿ ಪ್ರಮುಖ ರಸ್ತೆ ಮಳೆಯಿಂದ ಕುಸಿದು ಹೋಗಿದ್ದ ಪರಿಣಾಮ ಸುಮಾರು ಒಂದು ಗಂಟೆಗಳ ಕಾಲ ವಾಹನಗಳ ಸಂಚಾರ ಅಸ್ಥವ್ಯಸ್ಥವಾಗಿತ್ತು,ಇದೇ ಸ್ಥಳದಲ್ಲೆ ನಿಂತಿದ್ದ ಲಾರಿಯೊಂದು ನೀರು ಹರಿದು ಮಣ್ಣು ಕುಸಿದ ಪರಿಣಾಮ ಸುಮಾರು ನಾಲ್ಕು ಅಡಿ ಕೆಳಕ್ಕೆ ಜಾರಿದ ಲಾರಿಯನ್ನ ಕ್ರೈನ್ ಸಹಾಯದಿಂದ ಮೇಲೆತ್ತಲಾಯಿತು.

ಮುಖ್ಯ ರಸ್ತೆಯಲ್ಲಿ ಸಾಕಷ್ಟು ನೀರು ಜಮಾಯಿಸಿ ವಾಹನಗಳು ಓಡಾಡುವ ಸ್ಥಿತಿಯನ್ನ ಕಳೆದುಕೊಂಡು ಬೇರೆ ಮಾರ್ಗಗಳಲ್ಲಿ ಓಡಾಡುವಂತೆ ರಸ್ತೆ ಮಾರ್ಪಾಟಾಗಿತ್ತು, ಕೂಡಲೆ ಕಾರ್ಯಪ್ರವೃತರಾದ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬಂಧಿ ವರ್ಗದವರು ಬೃಹತ್ ಲಾರಿಯಿಂದ ಮೂರು ನಾಲ್ಕು ಲೋಡ್ ಜಲ್ಲಿ ಕಲ್ಲು ತರಿಸಿ ಕುಸಿದುಹೋಗಿದ್ದ ರಸ್ತೆಗೆ ಜೆಸಿಬಿ ಮೂಲಕ ತುಂಬುವ ಮೂಲಕ ಸುಗಮ ಸಂಚಾರಕ್ಕೆ ಅನುವು ಮಾಡಿದ ನಂತರ ಎಲ್ಲಾ ವಾಹನಗಳು ಸಹಾ ಸುಗಮವಾಗಿ ಸಂಚರಿಸಲಾರಂಭಿಸಿದವು. ಇಷ್ಟಕ್ಕೆಲ್ಲಾ ಕಾರಣ ಒಳಚರಂಡಿ ನಿರ್ಮಾಣವಾಗದೆ ಇರುವುದು, ಇದೇ ಪ್ರವಾಸಿ ಮಂದಿರದ ಯಾವ ಭಾಗದಲ್ಲೂ ಸಹಾ ನೀರು ಸರಾಗವಾಗಿ ಹೋಗುವ ವ್ಯವಸ್ಥೆ ಇಲ್ಲಾ ಡ್ರೈನೇಜ್ ವ್ಯವಸ್ಥೆ ಇದ್ದಿದ್ದರೆ ಮಳೆಯ ನೀರು ಸರಾಗವಾಗಿ ಹರಿದು ಹೋಗುತಿದ್ದವು ನೀರು ಹರಿದು ಹೋಗಲು ಇಲ್ಲಿ ಸ್ಥಳವೆ ಇಲ್ಲಾ ಎನ್ನುವಂತಾಗಿದ್ದು ನಿಋಲು ಹೊರ ಹೋಗಲು ದಾರಿ ಇಲ್ಲದೆ ಪ್ರವಾಸಿ ಮಂದಿರದ ಒಳಗೂ ಸಹಾ ನೀರು ಜಮಾಯಿಸಿದ್ದವು ಇಲ್ಲಿಂದ ಹರಿದು ಬಂದ ನೀರು ರಭಸವಾಗಿ ಬಂದು ರಾಜ್ಯ ಹೆದ್ದಾರಿ ರಸ್ತೆಗೆ ಜಮಾಯಿಸುವುದರಿಂದ ಇಂತಹ ಅವಘಡಗಳು ಸಂಭವಿಸುತ್ತವೆ.ಇನ್ನು ತಾಲೂಕಿನ ದೇವಿಗೆರೆ- ಗುತ್ತಿಕಟ್ಟೆ ಮಧ್ಯೆ ರಸ್ತೆ ಕುಸಿದು ಲಾರಿಯೊಂದು ಸಿಲುಕಿದ್ದರಿಂದ ಸುಗಮ ಸಂಚಾರಕ್ಕೆ ಅಡ್ಡಿಯಾಯಿತು. ರಾಷ್ಟ್ರೀಯ ಹೆದ್ದಾರಿಯಲ್ಲಿಯೇ ಲಾರಿಯ ಚಕ್ರ ಸಿಲುಡದ್ದರಿಂದ ಲಾರಿಯನ್ನ ಹೊರತೆಗೆಲು ಚಾಲಕ ಹರಸಾಹಸ ಪಟ್ಟರೂ ಸಹಾ ಹೊರ ಬರಲಿಲ್ಲ, ಇದರಿಂದಾಗಿ ಹೊಸದುರ್ಗದಿಂದ ಚಿತ್ರದುರ್ಗ,ದಾವಣಗೆರೆ ಕಡೆಗೆ ಹೋಗುವ ಮತ್ತು ಬರುವ ವಾಹನಗಳ ಸಂಚಾರಕ್ಕೆ ತೀರ್ವ ತೊಂದರೆಯುಂಟಾಗಿ ಸುಮಾರು 30 ನಿಮಿಷಗಳ ಕಾಲ ರಸ್ತೆ ಸಂಚಾರದಲ್ಲಿ ಅಸ್ತವ್ಯಸ್ಥವಾಗಿತ್ತು ಕೊನೆಗೆ ಸಾಕಷ್ಟು ಜನರ ಸಹಕಾರದಿಂದ ಸಿಲುಕಿಕೊಂಡಿದ್ದ ಲಾರಿಯನ್ನ ಹೊರತೆಗೆಯಲಾಯಿತು.

ರಾಷ್ಟ್ರೀಯ ಹೆದ್ದಾರೆ ರಸ್ತೆಯ ರಸ್ತೆ ಕಾಮಗಾರಿ ಸ್ಥಿತಿಯೇ ಈ ರೀತಿ ಆದರೆ ಸಣ್ಣ ಪುಟ್ಟ ರಸ್ತೆ ಕಾಮಗಾರಿಗಳ ಸ್ಥಿತಿ ಏನಾಗಿರಬೇಕು. ರಾಷ್ಟ್ರೀಯ ಹೆದ್ದಾರಿ ರಸ್ತೆ ಕಾಮಗಾರಿ ಪ್ರಾರಂಭವಾಗಿ 2 ವರ್ಷ ಕಳೆಯುತ್ತಾ ಬಂದರೂ ಸಹಾ ಕಾಮಾಗಾರಿ ಪೂರ್ಣಗೊಂಡಿಲ್ಲ,ಮಾಡಿರುವ ಕೆಲಸವೂ ಸಹಾ ಕಳಫೆಯಿಂದ ಕೂಡಿದ ಎಂದು ವಾಹನ ಸವಾರರು ಹಾಗೂ ಸಾರ್ವಜನಿಕರು ಇಡೀ ಶಾಫ ಹಾಕುತ್ತಿದ್ದಾರೆ ಅಲ್ಲಲ್ಲಿ ನಿಂತಿರುವ ರಸ್ತೆ ಸಂಪೂರ್ಣವಾಗಿ ಕಳಫೆ ರಹಿತ ಕಾಮಗಾರಿಗಳನ್ನ ನಿರ್ಮಾಣ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂಬುದು ಎಲ್ಲರ ಒತ್ತಾಯವಾಗಿದ್ದು ಕಾಮಗಾರಿ ಸ್ಥಳಗಳಿಗೆ ಬೇಟಿ ನೀಡಿ ಸಂಬಂಧ ಪಟ್ಟವರು ಕಾಮಗಾರಿ ವೀಕ್ಷಣೆ ಮಾಡಿ ಕಳಪೆ ಕಾಮಗಾರಿ ಮಾಡಿರುವವರ ವಿರುದ್ಧ ಕಟ್ಟು ನಿಟ್ಟಿನ ಶಿಸ್ತು ಕ್ರಮ ಕೈಗೊಳ್ಳಬೇಕು ಹಾಗೂ ಅಲ್ಲಲ್ಲಿ ಅರ್ಧಕ್ಕೆ ನಿಂತಿರುವ ಹೆದ್ದಾರೆ ಕಾಮಗಾರಿಯನ್ನ ತುರ್ತಾಗಿ ಪೂರ್ಣಗೊಳಿಸಬೇಕು.

# ಪಿಯು ವಿಜ್ಞಾನ ಕನ್ನಡದಲ್ಲಿ ಬೋಧನೆ: ಪ್ರಾಯೋಗಿಕವಾಗಿ ಪ್ರತ್ಯೇಕ ವಿಭಾಗ ಪ್ರಾರಂಭ

» ಚಿತ್ರದುರ್ಗ

ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ ಪಿಯು ವಿಜ್ಞಾನ ಕನ್ನಡದಲ್ಲಿ ಬೋಧನೆ ಮಾಡುವ ನಿಟ್ಟಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ದಾಖಲಾಗುವ ಜಿಲ್ಲೆಯ ಕೆಲವು ಪಿಯು ಕಾಲೇಜುಗಳಲ್ಲಿ ಪ್ರಾಯೋಗಿಕವಾಗಿ ಪಿಯು ವಿಜ್ಞಾನ ಕನ್ನಡ ಬೋಧನೆಗೆ ಪ್ರತ್ಯೇಕವಾಗಿ ವಿಭಾಗ ಪ್ರಾರಂಭ ಮಾಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಪಿಯು ವಿಜ್ಞಾನ ಕನ್ನಡದಲ್ಲಿ ಬೋಧನೆ ಕುರಿತ ಸಭೆ ಹಾಗೂ ಪಿಯುಸಿ ಫಲಿತಾಂಶ ಸುಧಾರಣೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗದವರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾರೆ. 1 ರಿಂದ 10ನೇ ತರಗತಿವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ತಕ್ಷಣ ಇಂಗ್ಲಿಷ್‌ಮಾಧ್ಯಮಅಳವಡಿಸಿಕೊಳ್ಳುವುದು



ಕಷ್ಟಸಾಧ್ಯವಾಗಲಿದೆ. ಹಾಗಾಗಿ ಜಿಲ್ಲೆಯ ಪಿಯು ಕಾಲೇಜುಗಳಲ್ಲಿ ಪ್ರಾಯೋಗಿಕವಾಗಿ ಪಿಯು ವಿಜ್ಞಾನ ಕನ್ನಡ ಬೋಧನೆಗೆ ಪ್ರತ್ಯೇಕವಾಗಿ ವಿಭಾಗ ಪ್ರಾರಂಭ ಮಾಡಿದರೆ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದರು.

ಪಿಯು ವಿಜ್ಞಾನ ಸಿಇಟಿ, ನೀಟ್ ಪರೀಕ್ಷೆಗಳನ್ನು ಕನ್ನಡದಲ್ಲಿ ಬರೆಯುವ ಅವಕಾಶ ಕಲ್ಪಿಸಲಾಗಿದೆ. ರಾಜ್ಯ ಸರ್ಕಾರವೇ ಪಿಯು ವಿಜ್ಞಾನ ಪಠ್ಯಪುಸ್ತಕಗಳನ್ನು ಕನ್ನಡದಲ್ಲಿ ಮುದ್ರಿಸಿ ಎಲ್ಲಾ ಪಿಯು ಕಾಲೇಜುಗಳಿಗೆ ಪೂರೈಕೆ ಮಾಡಲಾಗಿದೆ. ಪಿಯು ವಿಜ್ಞಾನ ಕನ್ನಡ ಮಾಧ್ಯಮಕ್ಕೆ ಪ್ರವೇಶಾತಿ, ಪೋಷಕರ ಪ್ರತಿಕ್ರಿಯೆ, ಉಪನ್ಯಾಸಕರ ಅಭಿಪ್ರಾಯ ಆಧಾರದ ಮೇಲೆ ಮುಂದಿನ ತೀರ್ಮಾನಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಭಾಷಾ ವಿಷಯ ಪರಿಣಾಮಕಾರಿಯಾಗಿ ಕಲಿಸಿ: ಭಾಷಾ ವಿಷಯಗಳನ್ನು ಬೋಧನೆ ಮಾಡುವ ಶಿಕ್ಷಕರು, ಉಪನ್ಯಾಸಕರು ವಿದ್ಯಾರ್ಥಿಗಳಿಗೆ ಭಾಷಾ ವಿಷಯಗಳ್ನು ಪರಿಣಾಮಕಾರಿಯಾಗಿ ಕಲಿಸಬೇಕು. ಭಾಷೆಯ ಮೇಲೆ ಹಿಡಿತ ಸಾಧಿಸಿದರೆ ವಿದ್ಯಾರ್ಥಿಗಳು ಸುಲಭವಾಗಿ ಐಚ್ಛಿಕ ವಿಷಯಗಳನ್ನು ಅರ್ಥ ಮಾಡಿಕೊಳ್ಳಲು ಸಾಧ್ಯವಾಗಲಿದೆ. ಹಾಗಾಗಿ ಭಾಷಾ ವಿಷಯಗಳನ್ನು ಕಡ್ಡಾಯವಾಗಿ, ಪರಿಣಾಮಕಾರಿಯಾಗಿ ಕಲಿಸಬೇಕು ಎಂದು ತಾಕೀತು ಮಾಡಿದರು.

ಭಾಷಾ ವಿಷಯಗಳನ್ನು ಸರಳವಾಗಿ, ಪರಿಣಾಮಕಾರಿಯಾಗಿ ಕಲಿಸಬೇಕು. ಪಿಯು ಫಲಿತಾಂಶದಲ್ಲಿ ಅಗ್ರಸ್ಥಾನ ಪಡೆಯುವುದಕ್ಕಿಂತ ಮುಖ್ಯವಾಗಿ ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಜಿಲ್ಲೆಯಲ್ಲಿ ಪಿಯು ಪಾಸಾದ ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣ, ಕೆಎಎಸ್, ಐಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸುವುದು ಮುಖ್ಯವಾಗಬೇಕು ಎಂದರು.

ಪಿಯು ವಿಜ್ಞಾನ ಕನ್ನಡದಲ್ಲಿ ಬೋಧನೆ ಕುರಿತಂತೆ ಜಿಲ್ಲೆಯ ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರು ಸಾಧಕ-ಬಾಧಕಗಳ ಕುರಿತು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರಿಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ, ಅನ್ನದ ಭಾಷೆಯಾಗಿ ಕನ್ನಡ ವೇದಿಕೆಯ ಚಿಕ್ಕಪ್ಪನಹಳ್ಳಿ ಷಣ್ಮುಖ ಸೇರಿದಂತೆ ಜಿಲ್ಲೆಯ ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರು ಇದ್ದರು.

## ಫಾಸ್ಟ್ ನ್ಯೂಸ್

### 10 ತಿಂಗಳ ಮಗುವಿನ ದಾಖಲೆ: ಸಚಿವರಿಂದ ಅಭಿನಂದನೆ




» ಹಿರಿಯೂರು

ನಗರದ ಹುಳಿಯರು ರಸ್ತೆ ನಿವಾಸಿಗಳಾದ ಮಂಜುನಾಥ್ ಹಾಗೂ ಶ್ರೀಮತಿ ಪವಿತ್ರ ಇವರ ಸುಪುತ್ರಿ ಹತ್ತು ತಿಂಗಳ ಪುಟಾಣಿ ಆರ್ಯಹಿ ಇವರು 22 ನಮೂನೆಯ ವಾಹನಗಳನ್ನು ಗುರುತಿಸುವ ಮೂಲಕ ಅಂತರರಾಷ್ಟ್ರೀಯ ಬುಕ್ ಆಫ್ ರೆಕಾರ್ಡ್ಸ್ ನಲ್ಲಿ ದಾಖಲೆ ಮಾಡಿರುತ್ತಾರೆ. ಪುಟಾಣಿ ಆರ್ಯಹಿ ಅವರಿಗೆ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಯೋಜನೆ ಮತ್ತು ಸಾಂಕೀಕ ಖಾತೆಯ ಸಚಿವರಾದ ಡಿ ಸುಧಾಕರ್ ಅವರು ಹಾಗೂ ಮಾಜಿ ಶಾಸಕರಾದ ಶ್ರೀಮತಿ ಪೂರ್ಣಿಮಾ ಶ್ರೀನಿವಾಸ್ ರವರು ಅಭಿನಂದಿಸಿ ಶುಭ ಹಾರೈಸಿದ್ದಾರೆ

### ವಿಶ್ವ ರೆಡ್ ಕ್ರಾಸ್ ದಿನದ ಕಾರ್ಯಕ್ರಮದಲ್ಲಿ ಟಿಹೆಚ್‌ಇಓ ಎನ್.ಎಸ್.ಮಂಜುನಾಥ

# ರಕ್ತದಾನ, ಅಂಗಾಂಗಗಳ ದಾನ ಮಾಡಿ ಇನ್ನೊಬ್ಬರ ಜೀವ ಉಳಿಸಿ

» ಚಿತ್ರದುರ್ಗ

ರಕ್ತದಾನ ಮತ್ತು ಅಂಗಾಂಗಗಳ ದಾನ ಮಾಡಿ ಇನ್ನೊಬ್ಬರ ಜೀವ ಉಳಿಸಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ನಗರದ ಬಾಪುಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ವಿಶ್ವ ರೆಡ್ ಕ್ರಾಸ್ ದಿನದ ಅಂಗವಾಗಿ ದಾವಣಗೆರೆ ವಿಶ್ವವಿದ್ಯಾನಿಲಯ, ಬಾಪೂಜಿ ಸಮೂಹ ಸಂಸ್ಥೆಗಳು ಮತ್ತು ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ ಆಯೋಜಿಸಿದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹದಿಹರೆಯದ ಕಾಲಘಟ್ಟದಲ್ಲಿ ದೈಹಿಕ ಮಾನಸಿಕ ಸಾಮಾಜಿಕ ಬದಲಾವಣೆಯಾಗುವುದು ಸಹಜ. ಇಂತಹ ಸಮಯದಲ್ಲಿ ಮನಸ್ಸು ಹಿಡಿತದಲ್ಲಿಟ್ಟುಕೊಂಡು ಜೀವನ ಸಾರ್ಥಕತೆ ಮಾಡಿಕೊಳ್ಳಲು, ಜೀವನ ಸಾರ್ಥಕತೆ ವೆಬ್‌ಸೈಟ್‌ನಲ್ಲಿ ಹೆಸರು ನೋಂದಾಯಿಸಿ ನಾವು ಸತ್ತ ಮೇಲೂ ಬದುಕಿರಬೇಕಾದರೆ ಅಂಗಾಂಗ ದಾನ ಮಾಡಬೇಕು ಮತ್ತು ರಕ್ತದಾನ ಮಾಡುವುದರ ಮುಖಾಂತರ ಇನ್ನೊಬ್ಬರ ಜೀವ ಉಳಿಸಬೇಕು ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, 10 ರಿಂದ 19 ವರ್ಷದ ಹದಿಹರೆಯದ ವಯಸ್ಸಿನಲ್ಲಿ ಸ್ನೇಹಿತರ ಒತ್ತಡ, ಕುತೂಹಲ, ಗೆಳೆಯರಲ್ಲಿ ಒಂದಾಗಬೇಕೆಂಬ ಭಾವನೆ, ಮನೆಯ ವಾತಾವರಣ, ಇವುಗಳು ಹೆಚ್ಚು ಪ್ರಭಾವ ಬೀರುತ್ತಿದ್ದು, ಇಂತಹ ಸಮಯದಲ್ಲಿ ಮದ್ಯಪಾನ, ಧೂಮಪಾನದಂತ ದುಶ್ಚಟಗಳ ದಾಸರಾಗುತ್ತಾರೆ ನಮ್ಮ ಹದಿಹರೆಯದವರು. ತಾತ್ಕಾಲಿಕವಾಗಿ ಉಲ್ಲಾಸ, ಮೋಜಿಗಾಗಿ ಪ್ರಾರಂಭಿಸಿದ ಧೂಮಪಾನದ ದುಶ್ಚಟ ಗಂಭೀರ ಸ್ವರೂಪದ ಅನಾರೋಗ್ಯಕ್ಕೆ ಈಡಾಗುತ್ತಿದ್ದು, ಕ್ಷಯ, ಹೃದಯಬಡಿತ ಹೆಚ್ಚುತ್ತೆ, ರಕ್ತದೊತ್ತಡ, ಅಲ್ಸರ್, ಮೆದುಳು ನಿಷ್ಕ್ರಿಯೆಯಾಗಿ ಮಾನಸಿಕ ಬೌದ್ಧಿಕ ಬೆಳವಣಿಗೆ ಕುಂಠಿತ, ಜೀರ್ಣಕ್ರಿಯೆಯಲ್ಲಿ ತೊಂದರೆ, ನರ ದೌರ್ಬಲ್ಯ, ಬಿಪಿ ಏರುಪೇರಾಗಿ ಹೃದಯಾಘಾತ, ಕ್ಯಾನ್ಸರ್, ದಂತಕ್ಷಯ, ಗರ್ಭಪಾತ, ನರ ದೌರ್ಬಲ್ಯ ಬಿಪಿ ಏರುಪೇರಾಗಿ ಹೃದಯಾಘಾತ, ಗರ್ಭಧಾರಣೆಯಲ್ಲಿ ಕುಂಟಿತ ಸಂಭವಿಸಬಹುದು ಎಂದರು.

ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಕೆ.ಎಂ.ವೀರೇಶ್ ಮಾತನಾಡಿ, ಆರೋಗ್ಯ ಶಿಕ್ಷಣ ನಿಂತ ನೀರಾಗಬಾರದು, ಹರಿಯುವ ನೀರಾಗಬೇಕು. ಆರೋಗ್ಯದ ಅರಿವು ಪ್ರತಿಯೊಬ್ಬರಿಗೂ ಬೇಕು. ಆರೋಗ್ಯವಂತ ಮಕ್ಕಳು ದೇಶದ ಸಂಪತ್ತು ಆರೋಗ್ಯ ಶಿಕ್ಷಣದ ಪಾಠ ಕಲಿತ ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಂಡು ಆರೋಗ್ಯವಂತ ದೇಶ ಕಟ್ಟಲು ಸಹಕರಿಸಬೇಕು ಎಂದರು.

ಪ್ರಾಂಶುಪಾಲರಾದ ಎಂ.ಆರ್.ಜಯಲಕ್ಷ್ಮಿ ಮಾತನಾಡಿ, ಪ್ರೀತಿ ವಿಶ್ವಾಸದಿಂದ ಪ್ರತಿಯೊಂದು ಸಾಧನೆ ಮಾಡಬಹುದು.






Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T